ಸಂಪುಟ : 10 ಸಂಚಿಕೆ: 247 ಪುಟ : 4+2 ಬೆಲೆ: 3.00 ಗುರುವಾರ ನವೆಂಬರ್ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 247 Pages : 4+2 Price : 3.00 Thursday November 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ: ಸಿಎಂ, ಗೃಹ ಸಚಿವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಯುವ ಮೋರ್ಚಾ ಪ್ರತಿಭಟನೆ, ಮನವಿ

# ರಾಜ್ಯ ಸರ್ಕಾರ ಕ್ರಿಮಿನಲ್‌ಗಳನ್ನು ಪೋಷಿಸುತ್ತಿದೆ




ಯುವ ಮೋರ್ಚಾ ಗದಗ ನಗರ ಮಂಡಲ ಅಧ್ಯಕ್ಷ ನವೀನ ಕೊಟೆಕಲ್ ಮಾತನಾಡಿ, ಅಕ್ರಮ ಚಿನ್ನ ಸಾಗಾಣಿಕೆ ಪ್ರಕರಣದಲ್ಲಿ ಜೈಲು ಸೇರಿದ ತರುಣ್ ಎನ್ನುವ ಆರೋಪಿಗೂ ಸಹ ರೆಸಾರ್ಟ್ ಸೌಲಭ್ಯ ನೀಡಿರುವುದನ್ನು ಗಮನಿಸಿದರೆ ಗೃಹ ಸಚಿವರು ನಿದ್ದೆ ಮಾಡುತ್ತಿದ್ದಾರೋ ಅಥವಾ ಅವರೇ ಈ ಎಲ್ಲ ವ್ಯವಸ್ಥೆಗಳಿಗಾಗಿ ಜೈಲಿನ ಅಧಿಕಾರಿಗಳಿಗೆ ಮೌಖಿಕ ಸೂಚನೆ ನೀಡಿದ್ದಾರೋ ಎನ್ನುವ ಅನುಮಾನಗಳು ಜನತೆಯನ್ನು ಕಾಡುತ್ತಿವೆ. ಈ ಕೃತ್ಯವನ್ನು ಬಿಜೆಪಿ ಯುವ ಮೋರ್ಚಾ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸುತ್ತದೆ. ನೈತಿಕ ಹೊಣೆ ಹೊತ್ತು ರಾಜ್ಯದ ಮುಖ್ಯಮಂತ್ರಿ ಹಾಗೂ ಗೃಹಸಚಿವರು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ ಒದಗಿಸುವ ಮೂಲಕ ರಾಜ್ಯ ಸರ್ಕಾರ ಕ್ರಿಮಿನಲ್‌ಗಳನ್ನು ಪೋಷಿಸುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿ, ಸಿ.ಎಂ ಸಿದ್ಧರಾಮಯ್ಯ ಹಾಗೂ ಗೃಹ ಸಚಿವರ ರಾಜೀನಾಮೆಗೆ ಒತ್ತಾಯಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಸಿ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ, ವಿವಿಧ ಕ್ರಿಮಿನಲ್ ಪ್ರಕರಣಗಳಲ್ಲಿ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಇರುವ ಕೈದಿಗಳಿಗೆ ರಾಜಾತಿಥ್ಯ ನೀಡುವ ಮೂಲಕ ರಾಜ್ಯ ಸರ್ಕಾರ ಕ್ರಿಮಿನಲ್‌ಗಳನ್ನು ಪೋಷಿಸುವ ಕೆಲಸ ಮಾಡುತ್ತಿರುವ ಬಗ್ಗೆ ರಾಜ್ಯದ ಜನತೆಯಲ್ಲಿ ಆಕ್ರೋಶ ವ್ಯಕ್ತವಾಗಿದೆ ಎಂದರು.


ಗದಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಅಪರಾಧಿಕ ಮನಸ್ಸಿನಿಂದ ಹೊರಬರಲು ಶಿಕ್ಷೆಗೆ ಒಳಗಾದ ಕೈದಿಗಳಿಗೆ ಜೈಲುಗಳಲ್ಲೇ ರಾಜಾಶ್ರಯ ನೀಡುವ ಮೂಲಕ ರಾಜ್ಯ ಸರ್ಕಾರ ಭಯೋತ್ಪಾದಕರು, ಕ್ರಿಮಿನಲ್‌ಗಳು, ಅತ್ಯಾಚಾರಿಗಳಿಗೆ, ವಂಚಕರಿಗೆ ನಿರ್ಭೀತಿಯಿಂದ ಮೊಬೈಲ್, ಮದ್ಯ, ಗಾಂಜಾ, ಸಿಗರೇಟ್ ಸೇರಿದಂತೆ ಎಲ್ಲಾ ಸವಲತ್ತುಗಳನ್ನು ದೊರಕಿಸಿಕೊಟ್ಟಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದೆ. ಈಗಾಗಲೇ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಉಗ್ರ ಚಟುವಟಿಕೆಯಲ್ಲಿ ಭಾಗಿಯಾದ ಭಯೋತ್ಪಾದಕನಿಗೆ ಮೊಬೈಲ್ ನೀಡಿರುವುದು ದೇಶಕ್ಕೆ ಗಂಡಾಂತರ ತರುವ ಕೃತ್ಯವಾಗಿದೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ತನಿಖೆ ನಡೆಸಲು ಎನ್‌ಐಎಗೆ ವಹಿಸಬೇಕು ಎಂದು ಈ ಮೂಲಕ ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾ ಘಟಕ ಆಗ್ರಹಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಆರ್.ಕೆ. ಚವ್ಹಾಣ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಮುಖರಾದ ಅನಿಲ ಅಬ್ಬಿಗೇರಿ, ಶಶಿಧರ ದಿಂಡೂರ, ಅಮರನಾಥ ಗಡಗಿ, ಎಫ್.ಎಸ್. ಗೋಡಿ, ಮಂಜುನಾಥ ಶಾಂತಗೇರಿ, ಸುರೇಶ ಚಿತ್ತರಗಿ, ಶಂಕರ ಕಾಕಿ, ಯುವ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿ ಕತ್ತಿ, ಕಿರಣ ಕಲಾಲ, ಸಂತೋಷ ಜಾವೂರ, ಗ್ರಾಮೀಣ ಮಂಡಲ ಯುವ ಮೋರ್ಚಾ ಅಧ್ಯಕ್ಷ ಅರವಿಂದ ಅಣ್ಣಿಗೇರಿ, ನಗರಸಭಾ ಸದಸ್ಯರಾದ ವಿಜಯಲಕ್ಷ್ಮೀ ದಿಂಡೂರ, ವಿದ್ಯಾವತಿ ಗಡಗಿ, ಯುವ ಮೋರ್ಚಾ ರೋಣ ಮಂಡಲ ಅಧ್ಯಕ್ಷ ಹುಲ್ಲಪ್ಪ ಕೆಂಗಾರ, ಯುವ ಮೋರ್ಚಾ ಗದಗ ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಬಸವರಾಜ ನರೆಗಲ್, ವೀರೇಶಪ್ರಭು ಗದಗಿನ, ವಿನಾಯಕ ಹೊರಕೇರಿ, ಕಾರ್ತಿಕ ಶಿಗ್ಲಿಮಠ, ರಜತ್ ಬಿಮ್ಕರ್, ಸಾಗರ ಪಾಪನಾಳ, ಮಂಜುನಾಥ, ಕಿರಣ ಕಟ್ಟಿ, ನವೀನ ಕುರ್ತಕೋಟಿ, ಸುರೇಶ ಚವ್ಹಾಣ, ಅಕ್ಷಯ ರೇವಣಕರ, ಕಿರಣ ದಾಟನಾಳ, ಹಾಲೇಶ, ಮಲ್ಲಿಕಾರ್ಜುನ ಕಳಸಾಪೂರ, ಮಂಜುನಾಥ, ವಿನೋದ ಹಂಸನೂರ ಮುಂತಾದವರಿದ್ದರು.

---

## ಪೋಷಕ-ಶಿಕ್ಷಕರ ಮಹಾಸಭೆಯಲ್ಲಿ ಪಾಲ್ಗೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆಯಿಂದ ನವೆಂಬರ್ 14ರಂದು ಬೆಳಿಗ್ಗೆ 11 ಗಂಟೆಗೆ ಮಕ್ಕಳ ದಿನಾಚಾರಣೆಯ ಪ್ರಯುಕ್ತ ಜಿಲ್ಲಾದ್ಯಂತ ಏಕಕಾಲದಲ್ಲಿ 2025-26ನೇ ಸಾಲಿನ ಪೋಷಕ-ಶಿಕ್ಷಕರ ಮಹಾಸಭೆಯನ್ನು ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪೋಷಕರು ಭಾಗವಹಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕೋರಿದ್ದಾರೆ.

ಶಾಲೆಯು ಸಮುದಾಯದ ಒಂದು ಭಾಗವಾಗಿದ್ದು, ಭಾಗೀದಾರರು ಹಾಗೂ ಪೋಷಕರ ವಿಶ್ವಾಸ ಮತ್ತು ಸಹಕಾರವು ಸರ್ಕಾರಿ ಶಾಲಾ-ಕಾಲೇಜುಗಳನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತವೆ. ರಾಷ್ಟ್ರ ನಿರ್ಮಾಣ ಮತ್ತು ಚೈತನ್ಯಶೀಲ ಸಮಾಜ ನಿರ್ಮಾಣದ ಸಹಕಾರಕ್ಕಾಗಿ ಅರ್ಹ ವಯೋಮಾನದ ಎಲ್ಲಾ ಮಕ್ಕಳು ಶಾಲೆಗೆ ದಾಖಲಾಗಿ ನಿರಂತರವಾಗಿ ಹಾಜರಾಗಿ ಗುಣಮಟ್ಟದ ಶಿಕ್ಷಣ ಪಡೆಯುವುದು ಅತ್ಯಗತ್ಯವಾಗಿದೆ.

ಮಕ್ಕಳ ಕಲಿಕೆಯು ಶಾಲೆ, ಮನೆ ಮತ್ತು ಸಮಾಜಗಳ ನಡುವೆ ನಿರಂತರ ಸಂಪರ್ಕ ಕಲ್ಪಿಸುತ್ತದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪೋಷಕರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಅವರನ್ನು ಈ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವುದು ಈ ಕಾರ್ಯಕ್ರಮದ ▸▸3ನೇ ಪುಟಕ್ಕೆ

---

### ಪಿಎಸ್‌ಐ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಶಾಸಕ ಡಾ. ಚಂದ್ರು ಲಮಾಣಿ ಅಹೋರಾತ್ರಿ ಪ್ರತಿಭಟನೆ

# ಹಲ್ಲೆ ನಡೆಸಿದ ಅಧಿಕಾರಿಯನ್ನು ವರ್ಗಾವಣೆ ಮಾಡಿ



ಘಟನೆ ಸುದ್ದಿ ತಿಳಿಯುತ್ತಿದ್ದಂತೆಯೇ ಗದಗ ಡಿಎಸ್‌ಪಿ ಮುರ್ತುಜಾ ಖಾದ್ರಿ ಸ್ಥಳಕ್ಕೆ ಆಗಮಿಸಿ ಶಾಸಕ ಡಾ. ಚಂದ್ರು ಲಮಾಣಿ ಮತ್ತು ಅವರ ಬೆಂಬಲಿಗರ ಮನವೊಲಿಸಲು ಪ್ರಯತ್ನ ನಡೆಸಿದರು. ನಂತರ ಹಲ್ಲೆಗೆ ಒಳಗಾದ ವ್ಯಕ್ತಿಯ ಪತ್ನಿ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಜಾತಿನಿಂದನೆ ಪ್ರಕರಣ ದಾಖಲಿಸಿದರು.

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕಿನ ದೇವಿಹಾಳ ಗ್ರಾಮದಲ್ಲಿ ಇಸ್ಪೀಟ್ ಆಡುತ್ತಿದ್ದ ಎನ್ನಲಾದ ವ್ಯಕ್ತಿಯೋರ್ವನಿಗೆ ಅರೆಬೆತ್ತಲೆ ಮಾಡಿ ಪಿಎಸ್‌ಐ ಈರಪ್ಪ ರಿತ್ತಿ ಮತ್ತು ಪೊಲೀಸ್ ಸಿಬ್ಬಂದಿ ಅಮಾನುಷವಾಗಿ ಹಲ್ಲೆ ನಡೆಸಿದ್ದು, ಇವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಶಾಸಕ ಡಾ. ಚಂದ್ರು ಲಮಾಣಿ ಮತ್ತು ಅವರ ಬೆಂಬಲಿಗರು ಮಂಗಳವಾರ ರಾತ್ರಿ ಶಿರಹಟ್ಟಿ ಪೊಲೀಸ್ ಠಾಣೆ ಎದುರು ಅಹೋರಾತ್ರಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಕಳೆದ ಭಾನುವಾರ ಸೋಮೇಶ ಲಮಾಣಿ ಎಂಬಾತನ ಪತ್ನಿ ಗಂಗವ್ವ ಲಮಾಣಿ ಹಾಗೂ ಬಂಜಾರ ಸಮಾಜದ ಮುಖಂಡರು ದೂರು ನೀಡಲು ಬಂದರೂ ದೂರು ಸ್ವೀಕರಿಸದೇ ಕಳಿಸಿದ್ದಾರೆ. ಹಲ್ಲೆಗೊಳಗಾದ ವ್ಯಕ್ತಿಯು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಗಂಭೀರ ಸ್ವರೂಪದ ಗಾಯಗಳಾಗಿವೆ. ಇಸ್ಪೀಟ್ ಆಡದೇ ಇರುವ ವ್ಯಕ್ತಿಗೆ ಅರೆಬೆತ್ತಲೆ ಮಾಡಿ ಪಿಎಸ್‌ಐ ಮತ್ತು ಸಿಬ್ಬಂದಿ ಹೊಡೆದಿರುವುದು ಖಂಡನೀಯ. ಈ ಹಿಂದೆಯೂ ಇಂತಹ ಘಟನೆಗಳು ನಡೆದಿವೆ. ಆದ್ದರಿಂದ ಇವರನ್ನು ನಮ್ಮ ಮೂರು ತಾಲೂಕು ಬಿಟ್ಟು ಬೇರೆ ಕಡೆಗೆ ವರ್ಗಾವಣೆ ಮಾಡಬೇಕು. ನಮ್ಮ ಬೇಡಿಕೆ ಈಡೇರುವವರೆಗೂ ಪ್ರತಿಭಟನೆ ಮುಂದುವರೆಯಲಿದೆ ಎಂದರು.

ಅಹೋರಾತ್ರಿ ಪ್ರತಿಭಟನೆಗೆ ಮುಂದಾದ ವಿಷಯ ತಿಳಿಯುತ್ತಿದ್ದಂತೆಯೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಧ್ಯರಾತ್ರಿ 1 ಗಂಟೆಗೆ ಘಟನಾ ಸ್ಥಳಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಹಲ್ಲೆಗೊಳಗಾದ ವ್ಯಕ್ತಿಯು ತಾಲೂಕಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಆತನನ್ನು ಭೇಟಿಯಾಗಿ ಪುನಃ ಬಂದು ನಿಮ್ಮ ಅಭಿಪ್ರಾಯವನ್ನು ತಿಳಿಸಬೇಕೆಂದು ಶಾಸಕ ಡಾ. ಲಮಾಣಿ ಪಟ್ಟು ಹಿಡಿದರು.

ಇದಕ್ಕೆ ಸ್ಪಂದಿಸಿದ ಎಸ್‌ಪಿ ರೋಹನ್ ಜಗದೀಶ ತಾಲೂಕಾಸ್ಪತ್ರೆಗೆ ಭೇಟಿ ನೀಡಿ ಆತನ ಆರೋಗ್ಯ ವಿಚಾರಿಸಿ ಮರಳಿ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ಈಗಾಗಲೇ ಈ ಕುರಿತು ಆತನ ಪತ್ನಿ ಪ್ರಕರಣ ದಾಖಲಿಸಿದ್ದು, ಇದರ ವಿಚಾರಣೆಯು ಡಿಎಸ್‌ಪಿ ಹಂತದಲ್ಲಿ ಆಗಲಿದೆ. ತದನಂತರ ತಪ್ಪಿತಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಇದಕ್ಕೆ ಪ್ರತಿಭಟನಾಕಾರರು ಒಪ್ಪದಿದ್ದಾಗ, ಸೂಕ್ತ ಬಂದೋಬಸ್ತ್ ಕಲ್ಪಿಸಬೇಕೆಂದು ಸಿಬ್ಬಂದಿಗೆ ಸೂಚಿಸಿ ತೆರಳಿದರು.

ಪ್ರತಿಭಟನೆಯಲ್ಲಿ ಜಾನು ಲಮಾಣಿ, ನಾಗರಾಜ ಲಕ್ಕುಂಡಿ, ಫಕ್ಕೀರೇಶ ರಟ್ಟಿಹಳ್ಳಿ, ಶಂಕರ ಮರಾಠೆ, ಮುಂಡಲೀಕ ಲಮಾಣಿ, ಪರಶುರಾಮ ಡೊಂಕಬಳ್ಳಿ, ವೀರಣ್ಣ ಅಂಗಡಿ, ರಾಮಣ್ಣ ಕಂಬಳಿ, ಫಕ್ಕೀರೇಶ ಕರಿಗಾರ, ಶ್ರೀನಿವಾಸ ಬಾರಬಾರ, ಸಂತೋಷ ತೋಡೆಕಾರ, ಅಪ್ಪಣ್ಣ ಕುಬೇರ, ವಿಠ್ಠಲ ಬಿಢವೆ, ಅಕ್ಬರಸಾಬ ಯಾದಗಿರಿ ಮುಂತಾದವರು ಉಪಸ್ಥಿತರಿದ್ದರು.

---

### ಪ್ರಾಥಮಿಕ, ಪ್ರೌಢಶಾಲಾ ಮಕ್ಕಳ ಮೇಲಾಟಗಳ ಕ್ರೀಡಾಕೂಟಕ್ಕೆ ಡಿಸಿ ಸಿ.ಎನ್. ಶ್ರೀಧರ ಚಾಲನೆ

# ಕ್ರೀಡೆ ಜೀವನದ ಅವಿಭಾಜ್ಯ ಅಂಗವಾಗಿರಲಿ



ಕ್ರೀಡಾಂಗಣದಲ್ಲಿ ಪಾದಾರ್ಪಣೆ ಮಾಡುವ ಪ್ರತಿಯೊಬ್ಬ ಕ್ರೀಡಾಪಟು ಗೆಲುವಿಗಿಂತ ಮಿಗಿಲಾಗಿ ಪ್ರಯತ್ನದ ಸಾರ್ಥಕತೆಯನ್ನು ಪ್ರದರ್ಶಿಸಲು ಬಂದಿದ್ದೇವೆ ಎಂದು ತಿಳಿದು ಕ್ರೀಡಾ ಸ್ಫೂರ್ತಿ ಮೆರೆಯಬೇಕು. ಗೆಲ್ಲುವುದು ಗೌರವ, ಆದರೆ ಪಾಲ್ಗೊಳ್ಳುವುದು ಪ್ರೇರಣೆ ಎಂಬ ಮಾತನ್ನು ತಾವೆಲ್ಲರೂ ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ದೃಢಪಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಕ್ರೀಡೆ ಜೀವನದ ಅವಿಭಾಜ್ಯ ಅಂಗವಾಗಿರಲಿ. ಜಿಲ್ಲೆಯಲ್ಲಿ ಇರುವ ಕ್ರೀಡಾ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳುವದು ಸಹ ಉತ್ತಮ ನಡೆ. ಕ್ರೀಡೆಯಲ್ಲಿ ಸದಾ ಪಾಲ್ಗೊಳ್ಳಿ, ಸೋಲು-ಗೆಲವು ಇದ್ದೇ ಇರುತ್ತದೆ. ಶಕ್ತಿ, ಶಿಸ್ತು, ಉತ್ಸಾಹ ಹಾಗೂ ಆತ್ಮ ವಿಶ್ವಾಸದ ಪ್ರತೀಕವಾಗಿರುವ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವುದೇ ಪ್ರಮುಖ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನುಡಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಬುಧವಾರ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಿದ್ದ ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ 14 ಮತ್ತು 17 ವಯೋಮಿತಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಬಾಲಕ/ ಬಾಲಕಿಯರ ಮೇಲಾಟಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಮಾನಸಿಕ ಹಾಗೂ ದೈಹಿಕವಾಗಿ ಹೆಚ್ಚು ಚಟುವಟಿಕೆಯಿಂದ ಬಾಲ್ಯದ ಜೀವನ ಕೂಡಿರಬೇಕು. ಆಗ ಮಾತ್ರವೇ ಆತ್ಮವಿಶ್ವಾಸ ಬೆಳೆಯಲು ಸಾಧ್ಯ. ಜಿಲ್ಲೆಯಲ್ಲಿ ಕ್ರೀಡಾ ಸೌಲಭ್ಯಗಳು ಉತ್ತಮವಾಗಿವೆ. ಇವುಗಳನ್ನು ಬಳಸಿಕೊಂಡು ಕ್ರೀಡಾ ಸಾಧನೆ ಮಾಡಲು ಕರೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಈ ಜಿಲ್ಲಾ ಮಟ್ಟದ ಕ್ರೀಡಾಕೂಟವು ಎಲ್ಲರಲ್ಲಿ ಹೊಸ ಶಕ್ತಿ, ಉತ್ಸಾಹ ಕ್ರೀಡಾ ಮನೋಭಾವ ತುಂಬಲಿ ಎಂಬ ಆಶಯದೊಂದಿಗೆ ಆಯೋಜಿಸಲಾಗಿದೆ. ಇಲ್ಲಿ ಪಾಲ್ಗೊಳ್ಳುವ ಎಲ್ಲ ವಿದ್ಯಾರ್ಥಿಗಳು ನಮ್ಮವರೇ. ತೀರ್ಪುಗಾರರು, ಆಯೋಜಕರು ಸರಿಯಾಗಿ ತೀರ್ಪು ನೀಡುವ ಮೂಲಕ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವಂತೆ ತಿಳಿಸಿದರು.

ಜಿಲ್ಲಾ ಕೆಡಿಪಿ ಸದಸ್ಯರಾದ ಎಸ್.ಎನ್. ಬಳ್ಳಾರಿ ಮಾತನಾಡಿ, ಕ್ರೀಡಾಪಟುಗಳಿಗೆ ಪೂರಕವಾದ ವಾತಾವರಣ ಗದಗ ಜಿಲ್ಲೆಯಲ್ಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿದ್ದಾರೆ. ಕ್ರೀಡಾ ಕ್ಷೇತ್ರದಲ್ಲಿ ಜಿಲ್ಲೆ ಹೆಚ್ಚಿನ ಸಾಧನೆ ಮಾಡಲಿ ಎಂಬುದು ಸಚಿವರ ಆಶಯವಾಗಿದೆ. ಹಾಕಿ ಕ್ರೀಡೆಯಲ್ಲಿ ಬೇನು ಬಾಟ್ ಅವರ ಆಟ ನೋಡಲು ಹಿಟ್ಲರ್ ಅವರು ಬರುತ್ತಿದ್ದರು ಎಂದರೆ ಅವರು ಅಂತಹ ವಿಶಿಷ್ಠವಾದ ಪ್ರದರ್ಶನ ನೀಡುತ್ತಿದ್ದರು ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಬಸವರಾಜ ಕಡೆಮನಿ, ಡಾ. ಬಸವರಾಜ ಬಳ್ಳಾರಿ, ಬಿ.ಎಫ್. ಪೂಜಾರ, ವಿ.ಎಂ. ಹಿರೇಮಠ, ವಿ.ಎಫ್. ಕಲಕಂಬಿ, ಎಂ.ಕೆ. ಲಮಾಣಿ, ರಾಜು ಚವ್ಹಾಣ, ಶರಣಪ್ಪ ನಾವಳ್ಳಿ, ಎಲ್.ಸಿ. ಚೌಕಿಮಠ, ಎಸ್.ಡಿ. ಮುಳಗುಂದ, ರವಿರಾಜ ಪವಾರ, ವಿ.ವಿ. ನಡುವಿನಮನಿ, ಆರ್.ವಿ. ಶೆಟ್ಟೆಪ್ಪನವರ, ಶಂಕರ ಹಡಗಲಿ, ಶಿವಕುಮಾರ ಕುರಿಯವರ, ಶರಣು ಗೋಗೇರಿ, ವಸಂತ ಮಡ್ಲೂರ, ಎನ್.ಆರ್. ನಿಡಗುಂದಿ, ಎಂ.ವಿ. ಪಾಟೀಲ, ಎಲ್.ಡಿ. ಪಾಟೀಲ, ಆರ್.ಎಸ್. ನರೇಗಲ್, ಎಲ್.ಬಿ. ಹುಡೇದ, ಎಸ್.ಕೆ. ಮಂಗಳಗುಡ್ಡ ಸೇರಿದಂತೆ ಕ್ರೀಡಾಪಟುಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕೆಕೆಪಿಪಿಜಿ ಸಂಗೀತ ಪಾಠಶಾಲೆ ವಿದ್ಯಾರ್ಥಿಗಳು ನಾಡಗೀತೆ ಪ್ರಸ್ತುತಪಡಿಸಿದರು. ಎಂ.ಎಸ್. ಕುಚಬಾಳ ಕಾರ್ಯಕ್ರಮ ನಿರ್ವಹಿಸಿದರು. ಜೆ.ಬಿ. ಅಣ್ಣಿಗೇರಿ ವಂದಿಸಿದರು.

---

### ನಾಗಾ ಸಾಧುಗಳ ನೇತೃತ್ವದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು

# ಕಿರಿಯ ಕುಂಭಮೇಳಕ್ಕೆ ಭಕ್ತರ ದಂಡು



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿಯ ಮೈದಾನದಲ್ಲಿ ಅತಿರುದ್ರ ಮಹಾಯಜ್ಞ ಸೇವಾ ಸಮಿತಿಯು ಆಯೋಜಿಸಿರುವ ಅತಿರುದ್ರ ಮಹಾಯಾಗ ಮತ್ತು ಕಿರಿಯ ಕುಂಭಮೇಳದ 2ನೇ ದಿನವಾದ ಬುಧವಾರ ಗದುಗಿನ ಭಕ್ತರು ಸಾಗರೋಪಾದಿಯಲ್ಲಿ ಆಗಮಿಸಿ ಪೂಜಾ ಕಾರ್ಯಕ್ರಮಗಳ ದರ್ಶನ ಪಡೆದರು.

ನಾಗಾಸಾಧು ಶ್ರೀ ಸಹಾದೇವಾನಂದ ಗಿರಿ ಜಿ ಮಹಾರಾಜರ ನೇತೃತ್ವದಲ್ಲಿ ವಿಶೇಷ ಹೋಮ-ಹವನ ಹಾಗೂ ಪೂಜಾ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು. ಅತಿರುದ್ರ ಮಹಾಯಜ್ಞದ ಅಂಗವಾಗಿ ಜರುಗಿದ ಪೂಜಾ ಕೈಂಕರ್ಯಗಳಲ್ಲಿ ನೂರಾರು ಸಾಧು-ಸಂತರು ಮತ್ತು ಭಕ್ತರು ಪಾಲ್ಗೊಂಡಿದ್ದರು. ಯಜ್ಞದ ಅಗ್ನಿಕುಂಡದ ಸುತ್ತ ನೆರೆದ ಭಕ್ತರು, ಲೋಕ ಕಲ್ಯಾಣಕ್ಕಾಗಿ ಪ್ರಾರ್ಥಿಸಿ ಪುನೀತರಾದರು.

ಕಿರಿಯ ಕುಂಭಮೇಳದ ಆವರಣದಲ್ಲಿ ವಿಶೇಷ ಆಕರ್ಷಣೆಯಾಗಿ ಪ್ರತಿಷ್ಠಾಪನೆಗೊಂಡಿರುವ ಶಿವಲಿಂಗದ ದರ್ಶನ ಪಡೆಯಲು ಭಕ್ತಾದಿಗಳು ಮುಂಜಾನೆಯಿಂದಲೇ ಸರತಿ ಸಾಲಿನಲ್ಲಿ ನಿಂತಿದ್ದರು. ನಗರದ ಮತ್ತು ಸುತ್ತಮುತ್ತಲಿನ ಸಾವಿರಾರು ಭಕ್ತರು ಶಿವಲಿಂಗದ ದರ್ಶನ ಪಡೆದು ಕೃತಾರ್ಥರಾದರು.

ಧಾರ್ಮಿಕ ಕಾರ್ಯಕ್ರಮದ ಪ್ರಮುಖ ಭಾಗವಾಗಿದ್ದ ಪ್ರಸಾದ ಸೇವೆಯಲ್ಲಿಯೂ ಸಾಮರಸ್ಯ ಕಂಡುಬಂದಿತು. ಕುಂಭಮೇಳಕ್ಕೆ ಆಗಮಿಸಿದ್ದ ಸಾವಿರಾರು ಭಕ್ತರು, ವಿದ್ಯಾರ್ಥಿಗಳು ಹಾಗೂ ಸೇವಕರು ಬೆಲ್ಲ-ಬೇಳೆಯ ಪಾಯಸ, ಅನ್ನ-ಸಾಂಬಾರ್ ಪ್ರಸಾದವನ್ನು ಸಂತೃಪ್ತಿಯಿಂದ ಸೇವಿಸಿದರು.

ಕಿರಿಯ ಕುಂಭಮೇಳದಲ್ಲಿ ಮುಸ್ಲಿಂ ಧರ್ಮದ ಮಹಿಳೆಯೋರ್ವರು ಭಕ್ತಿಯಿಂದ ಶಿವಲಿಂಗದ ದರ್ಶನಕ್ಕೆ ಆಗಮಿಸಿದ್ದು ವಿಶೇಷವಾಗಿತ್ತು. ಅನ್ಯ ಧರ್ಮದ ಮಹಿಳೆಯ ಶಿವಭಕ್ತಿ ಕಾರ್ಯಕ್ರಮದ ಮಹತ್ವಕ್ಕೆ ಇನ್ನಷ್ಟು ಮೆರುಗು ನೀಡಿತು.

# ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ವೈಷ್ಣವಿ ರಾಘವೇಂದ್ರ ಪೂಜಾರಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಾರ್ಯಾಲಯದ ಆಶ್ರಯದಲ್ಲಿ ಪಿ.ಪಿ.ಜಿ ಮಹಾವಿದ್ಯಾಲಯದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಾಚ್ಯಪ್ರಜ್ಞೆ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಈ ವಿದ್ಯಾರ್ಥಿಯು ದೆಹಲಿ ಪ್ರಜಾರಾಜ್ಯೋತ್ಸವದ ಪರೇಡ್‌ನಲ್ಲಿ ಭಾಗವಹಿಸಿ, ಲಕ್ಕುಂಡಿ ಬ್ರಹ್ಮಜಿನಾಲಯ ಸ್ಮಾರಕದ ಚಿತ್ರವನ್ನು ಬಿಡಿಸಿ ಗಮನ ಸೆಳೆದಿದ್ದಳು. ಮಾರ್ಗದರ್ಶನ ನೀಡಿದ ಚಿತ್ರಕಲಾ ಶಿಕ್ಷಕಿ ಸರೋಜಾ ಮುಂಡೇವಾಡಿ ಅವರನ್ನು ಎಸ್.ಡಿ.ಎಂ.ಸಿ ಪದಾಧಿಕಾರಿಗಳು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು ಸಾಧಕ ವಿದ್ಯಾರ್ಥಿನಿಯನ್ನು ಅಭಿನಂದಿಸಿದ್ದಾರೆ.



ಗದಗ ನಗರದ ವಿದ್ಯಾದಾನ ಸಮಿತಿಯ ಆವರಣದಲ್ಲಿ ಅತಿರುದ್ರ ಮಹಾಯಜ್ಞ ಸಮಿತಿಯ ಅಡಿಯಲ್ಲಿ ನಾಗಾಸಾಧು ಶ್ರೀ ಸಹಾದೇವಾನಂದ ಗಿರಿಜಿ ಮಹಾರಾಜರ ನೇತೃತ್ವದಲ್ಲಿ ನಡೆಯುತ್ತಿರುವ ಕಿರಿಯ ಕುಂಭಮೇಳದ ಅಂಗವಾಗಿ ವಿಶೇಷ ಹೋಮ-ಹವನ, ಪೂಜಾ ಕಾರ್ಯಕ್ರಮಗಳು ಜರುಗಿದವು.

**ನವೆಂಬರ್ 14, ಮಕ್ಕಳ ದಿನಾಚರಣೆ ನಿಮಿತ್ತ ವಿಶೇಷ ಲೇಖನ**

# ಸ್ವರ್ಗದ ಹೂಗಳು ಬಾಡದಂತೆ ನೋಡಿಕೊಳ್ಳಿ

ಮಕ್ಕಳು ಮುದ್ದಾದ ನಿಷ್ಕಲ್ಮಶ ಮನಸ್ಸಿನವರು. ದೊಡ್ಡವರ ಅನುಕರಣೆ ಮಾಡಿ, ಅವರಂತೆ ಅನುಕರಿಸುತ್ತಾರೆ. ಮಕ್ಕಳು ಸ್ವರ್ಗದಿಂದ ಬಂದ ಹೂವುಗಳು. ಮಕ್ಕಳು ನಮ್ಮ ಅತ್ಯಮೂಲ್ಯ ಸಂಪನ್ಮೂಲಗಳು. ಮಕ್ಕಳು ನಮ್ಮ ಉಜ್ವಲ ನಾಳೆಯ ಭರವಸೆಗಳನ್ನು ಮತ್ತು ನಮ್ಮ ಸಂತೋಷದ ಭವಿಷ್ಯದ ಕನಸುಗಳನ್ನು ಹೊತ್ತಿರುವ ಕುಸುಮಗಳು.

ಆ ಮಕ್ಕಳು ಜೀವನದ ಸುಖವನ್ನು ಸವಿಯುವ ಹಕ್ಕನ್ನು ಹೊಂದಲು, ದೇಶದ ಆರೋಗ್ಯವಂತ ಮತ್ತು ಪ್ರಜ್ಞಾವಂತ ನಾಗರಿಕರಾಗಿ ಬೆಳೆಯಲು ಅವಕಾಶ ನೀಡುವುದಕ್ಕಾಗಿ ಹಾಗೂ ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಜನ್ಮದಿನದ ಸವಿನೆನಪಿಗಾಗಿ ಈ ದಿನದಂದು ಮಕ್ಕಳ ಹಕ್ಕುಗಳು ಮತ್ತು ಶಿಕ್ಷಣದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ನ. 14ರಂದು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ.

ಇದು ಮಕ್ಕಳಿಗೆ ಖುಷಿಯಿಂದ ಕುಣಿಯುವ ದಿನ, ಬಾಲ್ಯದ ಸೊಗಸು, ಬೆಡಗು, ಬೆರಗು ಮತ್ತು ನೆಹರು ಅವರ ಮಕ್ಕಳ ಮೇಲಿನ ಅಪಾರ ಅಕ್ಕರೆ ಪ್ರೀತಿಯನ್ನು ಸಂಭ್ರಮದಿಂದ ನೆನೆವ ದಿನ. ಮಕ್ಕಳನ್ನು ರಾಷ್ಟ್ರದ ನಿಜವಾದ ಶಕ್ತಿ ಮತ್ತು ಸಮಾಜದ ಅಡಿಪಾಯವೆಂದು ಪರಿಗಣಿಸಲಾಗಿದೆ. ಹಾಗಾಗಿ ಒಂದು ಪುಸ್ತಕ, ಒಂದು ಪೆನ್ನು, ಒಂದು ಮಗು ಮತ್ತು ಒಬ್ಬ ಶಿಕ್ಷಕ ಜಗತ್ತನ್ನು ಬದಲಾಯಿಸಬಹುದು ಎಂದು ನಾವು ನೆನಪಿಟ್ಟುಕೊಳ್ಳೋಣ. ಅದರಂತೆ ನಮ್ಮ ಮಕ್ಕಳಿಗೆ ಕಣ್ಣು ತೆರೆದು ಕನಸು ಕಾಣಲು ಕಲಿಸಬೇಕು.

ನೆಹರು ಅವರು ತಮ್ಮ ಜನ್ಮದಿನವನ್ನು ಮಕ್ಕಳ ದಿನವನ್ನಾಗಿ ಆಚರಿಸಲು ಏಕೆ ಅನುಮತಿ ನೀಡಿದರು ಎನ್ನುವ ಕತೆಯೇ ರೋಚಕ. 1951ರಲ್ಲಿ ವಿಶ್ವಸಂಸ್ಥೆಯ ಒಂದು ಯೋಜನೆಯಡಿಯಲ್ಲಿ ಇಂಗ್ಲೆಂಡ್‌ನ ಮಕ್ಕಳ ಕಲ್ಯಾಣಕ್ಕಾಗಿ ವಿ.ಎನ್. ಕುಲಕರ್ಣಿ ಎನ್ನುವವರು ದುಡಿಯುತ್ತಿದ್ದರು. ಆ ದಿನಗಳಲ್ಲಿ ಬಡ ಮಕ್ಕಳ ಅಭಿವೃದ್ಧಿಗಾಗಿ ನಿಧಿ ಸಂಗ್ರಹಕ್ಕೆ ರಾಣಿ ಎಲಿಜಬೆತ್-2 ಅವರ ಜನ್ಮದಿನವನ್ನು, 'ಧ್ವಜ ದಿನಾಚರಣೆ'ಯನ್ನಾಗಿ ಆಚರಿಸುತ್ತಾ ಧನ ಸಂಗ್ರಹಿಸಲಾಗುತ್ತಿತ್ತು. ಆ ಸಂದರ್ಭದಲ್ಲಿ ಕುಲಕರ್ಣಿಯವರ ಮನಸ್ಸು ಸಹಜವಾಗಿಯೇ ಭಾರತೀಯ ಮಕ್ಕಳ ಸ್ಥಿತಿ-ಗತಿಯ ಕಡೆಗೆ ವಾಲಿತು.




ಇಂತಹದೊಂದು ಯೋಜನೆ ಭಾರತದಲ್ಲೂ ನಡೆಯಬೇಕು; ಮಕ್ಕಳಿಗಾಗಿ ಧನ ಸಂಗ್ರಹಿಸಿ ವಿಶೇಷ ಕಾರ್ಯಕ್ರಮಗಳನ್ನು ನಡೆಸಬೇಕು ಎನ್ನುವ ಬಗ್ಗೆ ವಿಶ್ವಸಂಸ್ಥೆಯಲ್ಲಿ ಪ್ರಸ್ತಾಪವಿಟ್ಟರು. ಇದಕ್ಕೆ ಭಾರತದ ಮೊದಲ ಪ್ರಧಾನಮಂತ್ರಿಯಾಗಿದ್ದ ಚಾಚಾ ನೆಹರೂ ಅವರ ಜನ್ಮದಿನದಷ್ಟು ಪ್ರಶಸ್ತವಾದ ದಿನ ಬೇರೊಂದಿಲ್ಲ ಎನ್ನುವ ಅಭಿಪ್ರಾಯವನ್ನೂ ಮುಂದಿಟ್ಟರು. ಮಕ್ಕಳೊಂದಿಗೆ ಮಗುವಾಗುತ್ತಿದ್ದ ಮತ್ತು ಮಕ್ಕಳ ಬಗ್ಗೆ ಅಪಾರ ಒಲವಿದ್ದ ನೆಹರುರವರು ಅತ್ಯಂತ ಸಂತೋಷದಿಂದ ತಮ್ಮ ಜನ್ಮದಿನವನ್ನು 'ಮಕ್ಕಳ ದಿನಾಚರಣೆ'ಯೆಂದು ಆಚರಿಸಲು ಒಪ್ಪಿಕೊಂಡರು. ಈ ರೀತಿ 1951ರಲ್ಲಿ ನವೆಂಬರ್ 14ರಂದು ಭಾರತದಲ್ಲಿ 'ಮಕ್ಕಳ ದಿನಾಚರಣೆ' ಆರಂಭವಾಯಿತು.

ರಾಷ್ಟ್ರವನ್ನು ಕಟ್ಟಲಾಗುತ್ತಿರುವ ಒಂದು ಮನೆಯೆಂದು ಪರಿಗಣಿಸುವುದಾದರೆ ಮಕ್ಕಳು ಆ ಮನೆ ನಿರ್ಮಾಣದ ಇಟ್ಟಿಗೆಗಳಂತೆ. ನಾವೆಷ್ಟು ಉತ್ತಮವಾದ ಇಟ್ಟಿಗೆಯನ್ನು ಮನೆಯ ನಿರ್ಮಾಣಕ್ಕಾಗಿ ಸಜ್ಜುಗೊಳಿಸುತ್ತೇವೆಯೋ ಅಷ್ಟು ಸುಂದರವಾದ ಮನೆ ನಿರ್ಮಾಣವಾಗುತ್ತದೆ. ದೇಶದ ಸಂಸ್ಕೃತಿ, ಕಲೆ, ಸಾಹಿತ್ಯ, ಸಂಪ್ರದಾಯ ಎಲ್ಲವೂ ಉಳಿದು ಬೆಳೆದು ಸಾಗಬೇಕು ಎಂದಾದರೆ ಪ್ರತಿಯೊಬ್ಬ ಹಿರಿಯರೊಳಗಿರುವ ಮಗುವೂ ಜೀವಂತವಾಗಿರಬೇಕು ಮತ್ತು ಪ್ರತಿ ಮಗುವಿಗೂ ಅತ್ಯುತ್ತಮ ಪೋಷಣೆಯ ಅಡಿಪಾಯ ದೊರೆಯಬೇಕು.

ಹಿಂದಿನ ಕಾಲದಲ್ಲಿ ಗುರುಗಳು ತಪ್ಪು ಮಾಡಿದ ವಿದ್ಯಾರ್ಥಿಗಳಿಗೆ ಕಿವಿ ಹಿಂಡಿ, ಅಗತ್ಯ ಬಿದ್ದಾಗ ದಂಡಂ ದಶಗುಣಂ ಎಂದು ಕೈಯ್ಯಲ್ಲಿ ಹಿಡಿದ ಬೆತ್ತದಿಂದ ಚುರುಕು ಮುಟ್ಟಿಸುತ್ತಿದ್ದ ಕಾರಣ ಮಕ್ಕಳೆಲ್ಲರೂ ಶಿಸ್ತು-ಸಂಯಮವನ್ನು ಕಲಿಯುತ್ತಿದ್ದರು. ಅದೇ ರೀತಿ ಮನೆಯಲ್ಲಿಯೂ ತಂದೆ-ತಾಯಿಯರೂ ಹಿರಿಯರು ಸಹ ಮಕ್ಕಳಿಗೆ ಸಂಸ್ಕಾರಗಳನ್ನು ಹೇಳಿಕೊಡುತ್ತಿದ್ದರು. ಆದರೆ ಇಂದು ಟಿವಿ ಮತ್ತು ಮೊಬೈಲ್‌ಗಳಿಂದಾಗಿ ಅವೆಲ್ಲವೂ ಮರೆಯಾಗಿ ಮಕ್ಕಳ ಕೈಗೆ ಮೊಬೈಲ್ ಕೊಟ್ಟು ಅಪ್ಪ-ಅಮ್ಮಂದಿರು ಟಿವಿಯ ಮುಂದೆ ಗಂಟೆಗಟ್ಟಲೆ ಕೂರಲು ಆರಂಭಿಸಿದ ಸಮಯದಲ್ಲೇ, ಆನ್‌ಲೈನ್ ಕ್ಲಾಸ್ ಜೊತೆಗೆ ಅಗ್ಗದ ಮೊಬೈಲ್ ಡೇಟಾ ದೊರೆತ ಮೇಲಂತೂ ಮಕ್ಕಳು ತಂದೆ-ತಾಯಿಯರ ಹತೋಟಿ ಕೈತಪ್ಪಿದ್ದರು ಎಂದರೂ ತಪ್ಪಾಗದು.

ಈ ದಿನ ಪೋಷಕರಾಗಿ ಮಾಡಬೇಕಿರುವ ಪ್ರಮುಖ ಜವಾಬ್ದಾರಿಯೆಂದರೆ, ಮಕ್ಕಳ ಬೆಳವಣಿಗೆಗೆ ನಿಮ್ಮ ಕೊಡುಗೆ ಹೇಗಿರಬೇಕು ಎಂಬ ಬಗ್ಗೆ ಚಿಂತನೆ ನಡೆಸುವುದು. ದೇಶದ ಪ್ರತಿ ಮಗುವಿಗೂ ಕೂಡ ಶಿಕ್ಷಣ ದೊರಕುವಂತಾಗಬೇಕು. ಲಾಲನೆ-ಪಾಲನೆಯಲ್ಲಿ ಯಾವುದೇ ಕೊರತೆಯಾಗಬಾರದು. ಮಕ್ಕಳಿಗೆ ಉತ್ತಮ ಅರ್ಹತೆ ಬರುವ ನಿಟ್ಟಿನಲ್ಲಿ ಹಿರಿಯರು ಶ್ರಮವಹಿಸಬೇಕು.

ಒಟ್ಟಾರೆಯಾಗಿ ನಾವು ಮಕ್ಕಳ ದಿನಾಚರಣೆಯಂದು ಮಕ್ಕಳಿಗೆ ಸೇವೆ ಸಲ್ಲಿಸುವುದು ಮಾತ್ರವಲ್ಲದೆ ಪ್ರತಿ ದಿನವೂ ಅವರ ಯೋಗಕ್ಷೇಮ ಮತ್ತು ಪ್ರಯೋಜನಕ್ಕಾಗಿ ಪ್ರತಿಜ್ಞೆ ಮಾಡಬೇಕು ಮತ್ತು ಅವರ ಕನಸುಗಳನ್ನು ಸುರಕ್ಷಿತವಾಗಿ ಸಾಧಿಸಲು ಸಹಾಯ ಮಾಡಬೇಕು.

ಹಾಗೆಯೇ ಮಕ್ಕಳ ಮೂಲಭೂತ ಹಕ್ಕುಗಳ ಬಗ್ಗೆ ಮಕ್ಕಳಷ್ಟೇ ಅಲ್ಲದೆ ಅವರ ಪಾಲಕರಿಗೆ ಕೂಡ ಸಂಪೂರ್ಣ ಮಾಹಿತಿ ನೀಡಿ ಅವರಲ್ಲಿ ಈ ವಿಷಯದ ಬಗ್ಗೆ ಹೆಚ್ಚು ಹೆಚ್ಚು ಅರಿವು ಮೂಡಿಸಲು ಪ್ರಯತ್ನಿಸಬೇಕು. ಹಾಗಾಗಿ ಈ ಮಕ್ಕಳ ದಿನ ನಾವು ಕಲಿಕೆಯನ್ನು ಸಕ್ರಿಯಗೊಳಿಸೋಣ, ಅವರ ಆರೋಗ್ಯಕ್ಕೆ ಆದ್ಯತೆ ನೀಡೋಣ ಮತ್ತು ಅವರ ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳೋಣ.



– ಬಸವರಾಜ ಎಮ್.ಯರಗುಪ್ಪಿ.
ಶಿಕ್ಷಕರು, ಲಕ್ಷ್ಮೇಶ್ವರ.

**ಬಲ್ಡೋಟ ಯೋಜನೆ ವಿರೋಧಿಸಿ 13ನೇ ದಿನದ ಧರಣಿ ಯಶಸ್ವಿ | ಶ್ರೀ ಗುರು ಬಸವೇಶ್ವರ ಚಾರಿಟೇಬಲ್ ಟ್ರಸ್ಟ್ ಸದಸ್ಯರ ಬೆಂಬಲ**

# ವಿಷ ಉಗುಳುವ ಕಾರ್ಖಾನೆಗಳು ಬೇಡ




■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರಕ್ಕೆ ಹೊಂದಿಕೊಂಡು ಬೃಹತ್ ಬಂಡವಾಳ ಹೂಡಿ ವಿಸ್ತರಣೆ ಮಾಡಲು ಮುಂದಾದ ಬಲ್ಡೋಟ ಬಿಎಸ್‌ಪಿಎಲ್ ವಿರುದ್ಧ ಫೆ. 24ರಂದು ಕೊಪ್ಪಳದ ಜನರು ಜಾಗೃತರಾಗಿ ಈ ವಿಸ್ತರಣೆ ಅನುಮತಿ ರದ್ದು ಮಾಡಬೇಕೆಂದು ಬೀದಿಗಿಳಿದು ಕೊಪ್ಪಳ ಭಾಗ್ಯನಗರ ಬಂದ್ ಮಾಡಿ ಪ್ರತಿಭಟಿಸಿದ್ದು, ಅದೇ ಹೋರಾಟವನ್ನು ಮುಂದುವರೆಸಲಾಗಿದೆ.

ಬಲ್ಡೋಟ ಮತ್ತು ಇತರೆ ಕಾರ್ಖಾನೆಗಳ ವಿಸ್ತರಣೆ ಮತ್ತು ಹೊಸ ಕಾರ್ಖನೆ ಸ್ಥಾಪನೆ ವಿರೋಧಿಸಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿಯ 13ನೇ ದಿನದಲ್ಲಿ ಶ್ರೀ ಗುರುಬಸವೇಶ್ವರ ಚಾರಿಟೆಬಲ್ ಟ್ರಸ್ಟ್ ಮತ್ತು ಇದರ ಮಹಿಳಾ ಘಟಕ ಪದಾಧಿಕಾರಿಗಳು ಹಾಗೂ ಸದಸ್ಯರು ದೊಡ್ಡ ಮಟ್ಟದ ಬೆಂಬಲ ವ್ಯಕ್ತಪಡಿಸಿದರು. ವಿಗುಬಚಾಟ್ರ ಮಹಿಳಾ ನಾಯಕಿ ಸೌಮ್ಯ ನಾಲವಾಡ ಅವರು ನಗರದ ಸ್ವಚ್ಛ ಪರಿಸರವನ್ನು ಹಾಳು ಮಾಡಲು ಬಂದ, ವಿಷ ಉಗುಳುವ ಕಾರ್ಖಾನೆಗಳು ಬೇಡ ಎಂದು ಈ ಭಾಗದ ಆರಾಧ್ಯ ದೈವ ಗವಿಸಿದ್ದೇಶ್ವರರು ಬೀದಿಗೆ ಬಂದಾಗ ಸಾವಿರಾರು ಮಹಿಳೆಯರು ಅವರನ್ನು ಬೆಂಬಲಿಸಿ ಹೋರಾಟಕ್ಕೆ ನಿಂತರು. ಆ ಸಂದರ್ಭದಲ್ಲಿ ಕುಹಕದ ಮಾತನಾಡಿದವರು ಸಹ ನಮ್ಮಲ್ಲಿದ್ದಾರೆ. ಅಂತವರಿಗೆ ಮತ್ತು ನಮ್ಮ ಬದುಕಿಗೆ ಈ ಹೋರಾಟ ಗೆದ್ದು ತೋರಿಸಲು ಮಹಿಳೆಯರು ದೊಡ್ಡ ಸಂಖ್ಯೆಯಲ್ಲಿ ಹೋರಾಟದ ಕಣಕ್ಕಿಳಿಯಲು ಛಲ ತೊಡುತ್ತೇವೆ ಎಂದರು. ಗವಿಶ್ರೀಗಳ ಮಾತಿಗೆ ಗೌರವಿಸಿ ಕಾರ್ಖಾನೆ ವಿಸ್ತರಣೆಗೆ ಶಾಶ್ವತ ತಡೆ ಆದೇಶ ತರುವ ತನಕ ಬಿಡುವುದಿಲ್ಲ ಎಂದು ಟ್ರಸ್ಟ್ ಕಾರ್ಯದರ್ಶಿ ರಾಜೇಶ ಸಸಿಮಠ ತಾಕೀತು ಮಾಡಿದರು. ಜೊತೆಗೆ ಪ್ರಕೃತಿ ಕಾಳಜಿಯ ಶರಣರ ವಚನ ಗಾಯನ ಮಾಡಿದ್ದು ವಿಶೇಷವಾಗಿತ್ತು.

ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಕೊಪ್ಪಳ ಇದರ ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಮಹಿಳೆಯರು ಹೋರಾಟಕ್ಕೆ ಹೆಚ್ಚು ಹೆಚ್ಚು ಧುಮುಕಬೇಕು ಎಂದರು.

ಪ್ರಗತಿ ಮಹಿಳಾ ಸಂಘದ ನಾಯಕಿ ಸಂಧ್ಯಾ ಮಾದಿನೂರು ಮಾತನಾಡಿ, 2008ರಲ್ಲಿ ಅಡಿಗಲ್ಲು ಇಡುವಾಗ ಬಸಾಪುರ ಕೆರೆಯಲ್ಲಿ ನಾನು, ವೇದಿಕೆಯ ಹಿರಿಯರು ಬಾಯಿ ಬಡಿದುಕೊಳ್ಳುತ್ತಾ ತಡೆಯಲು ಮುಂದಾದಾಗ ನಮ್ಮನ್ನು ಬಂಧಿಸಿ ಮುನಿರಾಬಾದ್ ಠಾಣೆಯಲ್ಲಿ ಇಟ್ಟಿದ್ದರು. ನಮ್ಮ ಮಾತು ಕೇಳದ್ದಕ್ಕೆ ಇಂದು ಲಕ್ಷಾಂತರ ಜನರು ಬಾಯಿ ಬಡಿದುಕೊಳ್ಳುವ ಹಾಗೆ ಆಗಿದೆ. ಜನಪ್ರತಿನಿದಿನಗಳು ಮೌನ ಮುರಿದು ಬಾಧಿತವಾದ 20 ಹಳ್ಳಿ ಮತ್ತು ನಗರದ ಜನರ ಆರೋಗ್ಯ ಕಾಪಾಡಬೇಕು. ನಾವು ಸುಮ್ಮನಿಲ್ಲ. ಕಾಯ್ದು ನೋಡುತ್ತಿದ್ದೇವೆ, ಶೀಘ್ರ ಉತ್ತರಿಸುತ್ತೇವೆ ಎಂದರು.

ಶ್ರೀವಿಗುಬಚಾಟ್ರ ಅಧ್ಯಕ್ಷ ಗುಡದಪ್ಪ ಹಡಪದ, ಎಂ. ಬಸವರಾಜಪ್ಪ, ಗಾಳೆಪ್ಪ ಕಡೆಮನಿ, ಶಿವಸಂಘಪ್ಪ ವಣಗೇರಿ, ಶಿವಪುತ್ರಪ್ಪ ಲಕ್ಕುಂಡಿ, ಎಂ.ಎಸ್. ಬೀರಲದಿನ್ನಿ, ಅರ್ಚನಾ ಸಸಿಮಠ, ಮಂಜುಳಾ ಪಾಟೀಲ್, ಸಂಗಪ್ಪ ಕೊಟ್ರಪ್ಪ ವಾರದ, ಕಾವ್ಯಾ ಗಡಾದ, ಸುಶೀಲಾ ರಾಂಪೂರ, ಜ್ಯೋತಿ ಕದ್ರಳ್ಳಿಮಠ, ಈರಮ್ಮ ಕೊಳ್ಳಿ, ಜ್ಯೋತಿ ಎಸ್.ಬಳ್ಳೊಳ್ಳಿ, ಶರಣಮ್ಮ ಹೆಚ್.ಕಲ್ಮಂಗಿ, ಶಿಲ್ಪಾ ಆರ್.ಸಸಿಮಠ, ವೀರಭದ್ರಪ್ಪ ನಂದ್ಯಾಲ, ರೂಪಾ ಎಸ್ ಶಿಂಗ್ರಿ, ವಿಶಾಲಾಕ್ಷಿ ಸಸಿಮಠ, ಉಮಾ ಕೊಪ್ಪಳ, ಮಲ್ಲಪ್ಪ ಕಡಗದ, ರವಿ ಕಾಂತನವರ, ಮರುಳಸಿದ್ಧೇಶ್ವರ, ಶಲಣಬಸನಗೌಡ ಪಾಟೀಲ, ಶಿವಪುತ್ರಪ್ಪ ಲಕ್ಕುಂಡಿ, ಬಾಪುಗೌಡ ಪಾಟೀಲ್, ಮಲ್ಲಪ್ಪ ಕಡಗದ, ಗದಿಗೆಪ್ಪ ಅಮಾತಿ, ಎಸ್ಬಿ ರಾಜೂರ, ಬಾಳಮ್ಮ ಮಾಳೆಕೊಪ್ಪ, ಪರಿಮಳ ವಿ.ಎಚ್, ಶಂಭುಲಿಂಗಪ್ಪ ಹರಗೇರಿ, ಶಿವಬಸಯ್ಯ ವೀರಾಪೂರ, ಮುರುಗೇಶ, ಶಾಂತಯ್ಯ ಅಂಗಡಿ, ಗುರುರಾಜ, ಈರಮ್ಮ ಕೊಳ್ಳಿ ಧರಣಿಯಲ್ಲಿ ಭಾಗವಹಿಸಿದ್ದರು.

ಸಾಹಿತಿ ಡಿ.ಎಂ. ಬಡಿಗೇರ, ಎ.ಎಂ. ಮದರಿ, ಕೆ.ಬಿ. ಗೋನಾಳ, ಮಂಜುನಾಥ ಜಿ.ಗೊಂಡಬಾಳ, ಮೂಕಪ್ಪ ಮೇಸ್ತ್ರಿ ಬಸಾಪುರ, ಮಖಬೂಲ್ ರಾಯಚೂರು, ಮಹಾದೇವಪ್ಪ ಎಸ್.ಮಾವಿನಮಡು, ಭೀಮಪ್ಪ ಯಲಬುರ್ಗಾ, ಗವಿಸಿದ್ದಪ್ಪ ಹಲಿಗಿ, ರಣದಪ್ಪ ಕವಲೂರು, ಶಿವಪ್ಪ ಹಡಪದ ಧರಣಿಯ ನೇತೃತ್ವ ವಹಿಸಿದ್ದರು.

# ವ್ಯವಸ್ಥಿತವಾಗಿ ಜವಾಬ್ದಾರಿ ನಿಭಾಯಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚಿನ ದಿನಗಳಲ್ಲಿ ಪಟ್ಟಣದಲ್ಲಿ ಸ್ವಚ್ಛತೆಯ ವಿಚಾರದಲ್ಲಿ ಪುರಸಭೆಯ ಕಾರ್ಯವೈಖರಿಯ ಬಗ್ಗೆ ಸಾಕಷ್ಟು ದೂರು, ಆರೋಪಗಳು ಕೇಳಿಬರುತ್ತಿವೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಪೌರ ಕಾರ್ಮಿಕರಿಂದ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವ ಜವಾಬ್ದಾರಿ ನಿಭಾಯಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಈ ಕುರಿತು ಮಂಗಳವಾರ ಪಟ್ಟಣದ ಪುರಸಭೆಯಲ್ಲಿ ಅಧಿಕಾರಿಗಳು ಮತ್ತು ಪೌರಕಾರ್ಮಿಕರೊಂದಿಗೆ ಚರ್ಚೆ ನಡೆಸಿದರು.

ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ಮಾತನಾಡಿ, ಪೌರ ಕಾರ್ಮಿಕರ ಕೊರತೆ ಸಾಕಷ್ಟಿದೆ. ಕಸವಿಲೇವಾರಿ ವಾಹನಗಳು ದುರಸ್ತಿಗೊಳಗಾಗಿವೆ. ಇನ್ನೂ ಹಲವು ಕಾರಣಗಳಿಂದ ಸ್ವಚ್ಛತಾ ಕಾರ್ಯ ನಿಭಾಯಿಸುವಲ್ಲಿ ವಿಳಂಬವಾಗುತ್ತಿದೆ ಎಂದು ಕಾರಣ ತಿಳಿಸಿದರು.

ಎಲ್ಲವನ್ನೂ ಆಲಿಸಿದ ಶಾಸಕರು, ಇದ್ದ ಸಿಬ್ಬಂದಿಯನ್ನೇ ಬಳಸಿಕೊಂಡು ಅವರಿಗೆ ವಾರ್ಡ್‌ವಾರು ಕೆಲಸ ಹಂಚಿಕೊಡಬೇಕು. ಸರಿಯಾಗಿ ಕೆಲಸ ಮಾಡದವರಿಗೆ ಎಚ್ಚರಿಕೆ ನೀಡಿ. ಆದಾಗ್ಯೂ ಸುಧಾರಿಸಿಕೊಳ್ಳದಿದ್ದರೆ ಕೆಲಸ ಮಾಡುವ ಬೇರೆಯವರಿಗೆ ಅವಕಾಶ ಕೊಡೋಣ. ಮುಂದೆ ಇನ್ನಷ್ಟು ಗುತ್ತಿಗೆ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಪ್ರಯತ್ನಿಸೋಣ. ಪೌರ ಕಾರ್ಮಿಕರಿಗೆ ಕೆಲಸದ ಕಿಟ್, ಸಾಮಗ್ರಿ, ಉಪಹಾರ, ಆರೋಗ್ಯ ಚಿಕಿತ್ಸೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ. ಪೌರ ಕಾರ್ಮಿಕರೂ ಸಹ ಪಟ್ಟಣದ ಸ್ವಚ್ಛತೆಗೆ ಪ್ರಾಮಾಣಿಕ ಕಾರ್ಯ ಮಾಡಬೇಕು. ಪಟ್ಟಣದಲ್ಲಿ ಖಾಲಿ ಇರುವ ನಿವೇಶನಗಳ ಸ್ವಚ್ಛತೆಗೆ ನಿವೇಶನ ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ. ಅನಧಿಕೃತ ಬ್ಯಾನರ್‌ಗಳ ಮೇಲೆ ನಿಯಂತ್ರಣ ಹೇರಿ. ಪುರಸಭೆ ಕರ ಬಾಕಿ ವಸೂಲಿ ಕಾರ್ಯ ನಿಭಾಯಿಸಿ, ಆರ್ಥಿಕ ಮುಗ್ಗಟ್ಟು ತಪ್ಪಿಸಿ ಎಂದರು.

ಈ ವೇಳೆ ಪುರಸಭೆ ಮಾಜಿ ಅಧ್ಯಕ್ಷ ಎಂ.ಆರ್. ಪಾಟೀಲ, ಗಂಗಾಧರ ಮೆಣಸಿನಕಾಯಿ, ಬಸವಣ್ಣೆಪ್ಪ ನಂದೆಣ್ಣವರ, ವಿಜಯ ಕುಂಬಾರ ಸಮಸ್ಯೆ ನಿವಾರಣೆಯ ಬಗ್ಗೆ ಕೆಲ ಸಲಹೆ-ಸೂಚನೆಗಳನ್ನು ನೀಡಿದರು. ಮುಖ್ಯಾಧಿಕಾರಿ ಮಾಂತೇಶ ಬೀಳಗಿ, ಅಧಿಕಾರಿಗಳಾದ ಶೋಭಾ ಬೆಳ್ಳಿಕೊಪ್ಪ, ಮಂಜುಳಾ ಹೂಗಾರ ಮತ್ತಿತರರಿದ್ದರು.

# ತಮಿಳುನಾಡು, ಪ.ಬಂಗಾಳದಲ್ಲಿ ಎಸ್‌ಐಆರ್ ಪ್ರಶ್ನಿಸಿ ಅರ್ಜಿ : ಚು. ಆಯೋಗಕ್ಕೆ ಸುಪ್ರೀಂ ನೋಟಿಸ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳಿಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ಕೋರಿ ಸುಪ್ರೀಂ ಕೋರ್ಟ್ ಮಂಗಳವಾರ (ನ.11) ಭಾರತೀಯ ಚುನಾವಣಾ ಆಯೋಗಕ್ಕೆ (ಇಸಿಐ) ನೋಟಿಸ್ ಜಾರಿ ಮಾಡಿದೆ.

ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಪುದುಚ್ಚೇರಿಯ ಎಸ್‌ಐಆರ್ ಪ್ರಶ್ನಿಸಿ ಡಿಎಂಕೆ, ಟಿಎಂಸಿ, ಕಾಂಗ್ರೆಸ್, ಸಿಪಿಐ(ಎಂ) ಮತ್ತು ಇತರರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಇವುಗಳ ಜೊತೆ ಬಿಹಾರಕ್ಕೆ ಸಂಬಂಧಿಸಿದ ಅರ್ಜಿಗಳು ಸೇರಿದಂತೆ ಎಲ್ಲವನ್ನೂ ಒಟ್ಟಿಗೆ ವಿಚಾರಣೆ ನಡೆಸಲಾಗುತ್ತಿದೆ.

# ರಾಷ್ಟ್ರಮಟ್ಟದ ಮಲ್ಲಕಂಬ ಸ್ಪರ್ಧೆಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬೆಂಗಳೂರಿನಲ್ಲಿ ಜರುಗಿದ ರಾಷ್ಟ್ರೀಯ ಪೈಥಿಯನ್ ಕ್ರೀಡಾಕೂಟದಲ್ಲಿ ಸಮಿಪದ ಹೊಸಳ್ಳಿ ಜಗದ್ಗುರು ಬೂದೀಶ್ವರ ವಿದ್ಯಾಪೀಠದ ವಿದ್ಯಾರ್ಥಿಗಳು ಮಲ್ಲಕಂಬ ಸ್ಪರ್ಧೆಯಲ್ಲಿ ರಾಷ್ಟ್ರೀಯ ಸ್ಪರ್ಧೆಗೆ ಕರ್ನಾಟಕದಿಂದ ಆಯ್ಕೆಯಾಗಿದ್ದಾರೆ.



ವಿದ್ಯಾರ್ಥಿಗಳಾದ ಕಾರ್ತಿಕ ಹೆಬಸೂರ, ಪುನೀತ ಕೆರಿಹೊಲ, ಸೃಜನಾ ಅಮ್ಮಿನಭಾವಿ, ಧೃವ ಮೇಗುರ, ಚೇತನ ಹುಡೆದ ಉತ್ತಮ ಸಾಧನೆ ಮಾಡಿ ದೇಹಲಿಯಲ್ಲಿ ಜರುಗುವ ರಾಷ್ಟ್ರೀಯ ಮಲ್ಲಕಂಬ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಸಂಸ್ಥೆಯ ಮುಖ್ಯಸ್ಥರಾದ ಅಭಿನವ ಬೂದೀಶ್ವರಸ್ವಾಮೀಜಿ, ಕುರ್ತಕೋಟಿ ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣಾ ಇನಾಮತಿ, ನಿವೃತ್ತ ಉಪನಿರ್ದೇಶಕ ಎಂ.ಎ. ರಡ್ಡೇರ, ತರಬೇತುದಾರ ಶಶಿಕುಮಾರ ಹರಕುಣಿಕಿ ಅಭಿನಂದಿಸಿದ್ದಾರೆ.

**ಶ್ರೀ ಅನ್ನಪೂರ್ಣೇಶ್ವರಿ ವಿವಿಧೋದ್ದೇಶಗಳ ಮಹಿಳಾ ಸಂಘ ಎಸ್.ಟಿ. ಸಂಘದ ಉದ್ಘಾಟನೆ**

# ಮಹಿಳಾ ಸಂಘಗಳ ಪಾತ್ರ ಹಿರಿದು

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಗಳು ಮಾಡದೇ ಇರುವ ಕೆಲಸಗಳನ್ನು ಇಂದು ಸಂಘ ಸಂಸ್ಥೆಗಳು ಮಾಡುತ್ತಿವೆ. ಅದರಲ್ಲಿ ವಿಶೇಷವಾಗಿ ಮಹಿಳಾ ಸಂಘಗಳ ಮತ್ತು ಯುವಕ-ಯುವತಿ ಸಂಘಗಳ ಪಾತ್ರ ಸಮಾಜದಲ್ಲಿ ಅತ್ಯಂತ ಮುಖ್ಯವಾಗಿದೆ. ಅದರಂತೆ ಮಹಿಳಾ ಸಂಘಗಳು ಸಮಾಜಮುಖಿಯಾಗಿ ಕೆಲಸ ಮಾಡಲಿ ಎಂದು ದೋಣಿ ಗ್ರಾಮ ಪಂಚಾಯಿತಿಯ ಮಾಜಿ ಸದಸ್ಯರು ಹಾಗೂ ಜಿಲ್ಲಾ ರೈತ ಮುಖಂಡರಾದ ಶಂಕರಗೌಡ ಎಂ.ಜಾಯಿನಗೌಡ್ರ ಮಾತನಾಡಿದರು.



ಅವರು ಮುಂಡರಗಿ ತಾಲೂಕಿನ ದೋಣಿ ಗ್ರಾಮದಲ್ಲಿ ಶ್ರೀ ಅನ್ನಪೂರ್ಣೇಶ್ವರಿ ವಿವಿಧೋದ್ದೇಶಗಳ ಮಹಿಳಾ ಸಂಘ ಎಸ್.ಟಿ. ಸಂಘದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಚಲನಚಿತ್ರ ಹಿನ್ನೆಲೆ ಗಾಯಕರು ಹಾಗೂ ಜನಪದ ಕಲಾವಿದರಾದ ನಿಂಗಪ್ಪ ಎಚ್. ಗುಡ್ಡದ ಮಾತನಾಡುತ್ತಾ, ಇಂದು ಫೇಸ್ಬುಕ್, ವಾಟ್ಸಾಪ್, ಇನ್‌ಸ್ಟಾಗ್ರಾಮ್, ಎಲೆಕ್ಟ್ರಾನಿಕ್ ಮಾಧ್ಯಮಗಳಿಂದ ನಮ್ಮ ಮೂಲ ಸಂಸ್ಕೃತಿ ಕಡಿಮೆಯಾಗುತ್ತಿರುವುದು ಖೇದಕರ ಸಂಗತಿ. ಇದನ್ನು ನಾವು ಖಂಡಿಸುವುದರ ಜೊತೆಗೆ ಯುವ ಪೀಳಿಗೆಗಳಿಗೆ ಮೂಲ ಜಾನಪದ ಸಾಹಿತ್ಯದ ಪರಿಚಯವನ್ನು ಮಾಡಿಕೊಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ. ಅಶ್ಲೀಲ ಸಾಹಿತ್ಯವನ್ನು ಮತ್ತು ಸಂಗೀತವನ್ನು ಪ್ರದರ್ಶನ ಮಾಡುವವರಿಗೆ ಇಂದು ಹೆಚ್ಚಿನ ಬೆಲೆ ಇದೆ. ಇದು ನಮ್ಮ ಸಂಸ್ಕೃತಿಗೆ ಧಕ್ಕೆ ಆಗುವ ಸಾಹಿತ್ಯವಾಗಿದೆ. ಅಂಥಹ ಸಾಹಿತ್ಯದಿಂದ ನಾವು ದೂರವಿರಬೇಕೆಂದರು.

ಅಧ್ಯಕ್ಷತೆಯನ್ನು ಹುಲಿಗೆಮ್ಮ ಮಲ್ಲಪ್ಪ ಅಳವುಂಡಿ ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾಗಿ ಗ್ರಾ.ಪಂ ಸದಸ್ಯರಾದ ರೇಣವ್ವ ತಳವಾರ, ಅಲ್ಲಾಭಕ್ಷಿ ದೊಡ್ಡಮನಿ, ರೈತ ಸಂಘದ ಮುಖಂಡ ಸೋಮಪ್ಪ ದುಂದೂರ, ಸಂಗೀತ ಕಲಾವಿದೆ ಪೂಜಾ ಬೇವೂರ, ಪ್ರಗತಿಪರ ರೈತರಾದ ದೇವಪ್ಪ ದಾಳಿನ, ಗ್ರಾ.ಪಂ ಮಾಜಿ ಸದಸ್ಯರಾದ ದೇವಮ್ಮ ಕವಲೂರ, ಯುವ ಮುಖಂಡರಾದ ಮಂಜುನಾಥ ಕವಲೂರ, ಮಹಿಳಾ ಸಂಘದ ನೇತ್ರಾವತಿ ಬೆಳ್ಳಿಗೌಡ್ರು, ಜುಮ್ಮಣ್ಣ ಮರಡಿ, ಶೋಭಾ ಬಸಪ್ಪ ಅಸುಂಡಿ ಮುಂತಾದವರು ಪಾಲ್ಗೊಂಡಿದ್ದರು.

ಮಂಜುನಾಥ ದೊಡ್ಡಮನಿ ಸ್ವಾಗತಿಸಿದರು. ಕೊನೆಯಲ್ಲಿ ಭೀಮವ್ವ ಗುಡೇನಕಟ್ಟಿ ವಂದಿಸಿದರು. ವೇದಿಕೆಯಲ್ಲಿ ಹುಯಿಲಗೋಳ ಗ್ರಾಮದ ಬಸವರಾಜ ಎಫ್. ಈರಣ್ಣವರ ಸಂಗಡಿರಿಂದ ಜಾನಪದ ನೃತ್ಯ, ಸಂಗೀತ ಕಾರ್ಯಕ್ರಮ ನಡೆಯಿತು. ಸನ್ನಿಧಿ ಜೊಂಡಿ ಇವಳಿಂದ ಭರತನಾಟ್ಯ ಜರುಗಿತು.

ಇದೇ ವೇಳೆ ಸಾಧಕರಾದ ಗಂಗಾಧರಯ್ಯ ಹಿರೇಮಠ, ಸಮೃದ್ಧಿ ಹಳೆಮನೆ, ಸೌಮ್ಯ ಮೀಸಿ, ಸಹನಾ ಸಿದ್ದಲಿಂಗಪ್ಪ ಹರ್ತಿ, ಮೃತ್ಯುಂಜಯ ಬಾಳಿಹಳ್ಳಿಮಠ ಮುಂತಾದವರನ್ನು ಗೌರವಿಸಲಾಯಿತು.

## ಶ್ರೀ ಶಂಕರ ಮಠದಲ್ಲಿ ಅದ್ವೈತಾನುಭವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸಂಭಾಪುರ ರಸ್ತೆಯಲ್ಲಿರುವ ಶ್ರೀ ಶಂಕರಮಠದಲ್ಲಿ ನ. 13ರ ಸಾಯಂಕಾಲ 6 ಗಂಟೆಗೆ ಅದ್ವೈತ ಪ್ರಸಾರ ಪರಿಷತ್ ವತಿಯಿಂದ, ಅದ್ವೈತಾನುಭವ 43 ಜರುಗಲಿದೆ.

ದಿವ್ಯ ಸಾನ್ನಿಧ್ಯವನ್ನು ವೇ.ಮೂ. ರತ್ನಾಕರಭಟ್ಟ ಜೋಶಿ ವಹಿಸಲಿದ್ದು, ಡಾ. ದತ್ತಪ್ರಸನ್ನ ಪಾಟೀಲ 'ಕರ್ನಾಟದದ ಏಕೀಕರಣಕ್ಕೆ ವಿಪ್ರ ಬಾಂಧವರ ಕೊಡುಗೆ' ಕುರಿತು ಮಾತನಾಡಲಿದ್ದಾರೆ. ಅಧ್ಯಕ್ಷತೆಯನ್ನು ಅದ್ವೈತ ಪ್ರಸಾರ ಪರಿಷತ್‌ನ ಅಧ್ಯಕ್ಷ ರಾಮಚಂದ್ರ ಮೋನೆ ವಹಿಸಿಕೊಳ್ಳಲಿದ್ದಾರೆ. ಈ ಕಾರ್ಯಕ್ರಮದ ಭಕ್ತಿ ಸೇವೆಯನ್ನು ಶ್ರೀ ಗಣಪತಿ ಕೌಜಲಗಿ ಕುಟುಂಬದವರು ವಹಿಸಿಕೊಳ್ಳಲಿದ್ದಾರೆ.

ಅದ್ವೈತ ಪ್ರಸಾರ ಪರಿಷತ್ತಿನ ವತಿಯಿಂದ ಶ್ರೀ ಚಂದ್ರಮೌಳೀಶ್ವರ, ಶಾರದಾಮಾತೆ, ಗಣೇಶ ಹಾಗೂ ಶ್ರೀ ಶಂಕರಾಚಾರ್ಯರಿಗೆ ಕಾರ್ತಿಕೋತ್ಸವ ನಡೆಯಲಿದೆ. ಶ್ರೀ ಶಂಕರರ ಅನುಯಾಯಿಗಳು, ಆಸ್ತಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲು ಅದ್ವೈತ ಪ್ರಸಾರ ಪರಿಷತ್‌ನ ಸರ್ವ ಸದಸ್ಯರು ವಿನಂತಿಸಿದ್ದಾರೆ.

## ಪೋಷಕ-ಶಿಕ್ಷಕರ ಮಹಾಸಭೆಯಲ್ಲಿ ಪಾಲ್ಗೊಳ್ಳಿ

▶▶ಮೊದಲನೇ ಪುಟದಿಂದ

ಪ್ರಮುಖ ಉದ್ದೇಶವಾಗಿದೆ ಎಂದು ಸಿ.ಎನ್. ಶ್ರೀಧರ ಹೇಳಿದ್ದಾರೆ.

ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಪೂರಕವಾಗಿ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಉಪಕ್ರಮಗಳು ಪೋಷಕರು, ಶಿಕ್ಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸುವುದು ಪೋಷಕ-ಶಿಕ್ಷಕ ಸಭೆಗಳ ಉದ್ದೇಶವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪೋಷಕರು, ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯ ಮೂಲಕ ಕೋರಿದ್ದಾರೆ.

### ಗದಗ ವಿಭಾಗದ ಅಂಚೆ ಇಲಾಖೆ ಪ್ರಶಸ್ತಿ ಪುರಸ್ಕೃತರಿಗೆ ಬಹುಮಾನ ವಿತರಣಾ ಕಾರ್ಯಕ್ರಮ

# ಅಂಚೆ ಇಲಾಖೆ ಸೇವೆ ಜನರ ಮನೆ ಬಾಗಿಲಿಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಂಚೆ ಇಲಾಖೆಯ ಮೂಲಕ ರಾಜ್ಯ ಹಾಗೂ ಕೇಂದ್ರ ಸರಕಾರ ವಿವಿಧ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸವನ್ನು ಮಾಡಲಾಗುತ್ತಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಪಿ. ಚಿದಾನಂದ ಅಭಿಪ್ರಾಯಪಟ್ಟರು.




ಪ್ರಧಾನ ಅಂಚೆ ಕಚೇರಿಯಯಲ್ಲಿ ಬುಧವಾರ ನಡೆದ ಗದಗ ವಿಭಾಗದ ಪ್ರಶಸ್ತಿ ಪುರಸ್ಕೃತರಿಗೆ ಬಹುಮಾನ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಸ್ತುತ ಪತ್ರ ವ್ಯವಹಾರದ ಜೊತೆಗೆ ಅಂಚೆ ಇಲಾಖೆಯಲ್ಲಿ ಡಿಜಟಲೀಕರಣ, ಬ್ಯಾಂಕಿಂಗ್, ವಿಮಾ, ಉಳಿತಾಯ ಖಾತೆ, ಠೇವಣಿ, ಅಪಘಾತ ವಿಮೆ ಸೇರಿದಂತೆ ಹಲವು ಯೋಜನೆಗಳನ್ನು ಪರಿಚಯಿಸಲಾಗುತ್ತಿದೆ. ಅವುಗಳನ್ನು ಹೆಚ್ಚೆಚ್ಚು ಜನರಿಗೆ ತಲುಪಿಸುವ ದಿಸೆಯಲ್ಲಿ ಪ್ರತಿಯೊಬ್ಬ ಅಂಚೆ ಸಿಬ್ಬಂದಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಈಗಾಗಲೇ ಹಲವು ವಿಭಾಗದಲ್ಲಿ ಗದಗ ವಿಭಾಗ ರಾಷ್ಟ್ರ ಮತ್ತು ರಾಜ್ಯ ಮಟ್ಟದ ಮುಂಚೂಣಿ ಸ್ಥಾನ ಗಿಟ್ಟಿಸಿಕೊಂಡಿದೆ. ಮಿಷನ್ ಸುರಕ್ಷ ಇದೇ ನ.1ರಿಂದ ಆರಂಭವಾಗಿದೆ. ಈ ವಿಭಾಗದಲ್ಲಿ ನಿರೀಕ್ಷಿತ ಗುರಿ ಸಾಧಿಸುವ ಕಾರ್ಯಕ್ಕೆ ಇನ್ನೂ 48 ದಿನಗಳ ಕಾಲಾವಕಾಶ ಇದೆ. ಹಾಗಾಗಿ ಎಲ್ಲರೂ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು.

ನಾಳೆಯಿಂದ 3 ದಿನಗಳ ವಿಶೇಷ ಮೇಳ ಆಯೋಜಿಸಲಾಗಿದೆ. ಸಾರ್ವಜನಿಕರು ಹೆಚ್ಚೆಚ್ಚು ಪಾಲಿಸಿ ಪಡೆದುಕೊಳ್ಳಬೇಕು. 8ಕ್ಕೂ ಹೆಚ್ಚು ವಿಮೆ ಯೋಜನೆಗಳನ್ನು ಒಳಗೊಂಡಿವೆ. ಇದರಿಂದ ಗದಗ ವಿಭಾಗದ ಸಾಧನೆ ವಲಯ ಮತ್ತು ರಾಜ್ಯ, ರಾಷ್ಟ್ರ ಮಟ್ಟದ ಮುಂಚೂಣಿ ಸಾಧನೆಗೆ ಸಹಕಾರಿಯಾಗಲಿದೆ. ಮುಂಬರುವ ದಿನಗಳಲ್ಲಿಯೂ ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿವ ಸಲುವಾಗಿ ಹಲವು ಬಹುಮಾನ ಸಹಿತ ಸ್ಥಾನ ಗಿಟ್ಟಿಸಿಕೊಳ್ಳಲು ಇರುವ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಲು ಮುಂದಾಗಬೇಕು ಎಂದರು.

> ಅಂಚೆ ಇಲಾಖೆ ಗದಗ ವಿಭಾಗದಿಂದ ಉಳಿತಾಯ ಪಾಕ್ಷಿಕ ಎರಡು ವಾರ ವಿಶೇಷ ಮೇಳ ನಡೆಯಲಿದೆ. ಹಾಗಾಗಿ ಎಲ್ಲರೂ ಹೆಚ್ಚೆಚ್ಚು ಖಾತೆ ತೆರೆಯಲು ಮುಂದಾಗಬೇಕು. ಜೊತೆಗೆ ಗ್ರಾಹಕರಿಗೆ ಖಾತೆ ತೊರೆಯುವದನ್ನು ಬಿಡುವಂತೆ ಮನವೊಲಿಸಲು ಮುಂದಾಗಬೇಕು. ಗದಗ ವಿಭಾಗದ ನಿಗದಿತ ಗುರಿ ಸಾಧನೆಯ ಹಿನ್ನೆಲೆಯಲ್ಲಿ ರಾಜ್ಯ ಮಟ್ಟದಲ್ಲಿ ಉಳಿತಾಯ ಸೇರಿದಂತೆ ಎಲ್ಲಾ ವಿಭಾಗದಲ್ಲಿ ಮುಂಚೂಣಿ ಸ್ಥಾನ ಹೊಂದಿದೆ. ಆದರೆ, ಪ್ರಸ್ತುತ ಇನ್ನೂ ಹೆಚ್ಚೆಚ್ಚು ಖಾತೆ ಆರಂಭಕ್ಕೆ ಮುಂದಾಗಬೇಕು ಎಂದು ಪಿ. ಚಿದಾನಂದ ಹೇಳಿದರು.

ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದಕ್ಕೂ ಮುನ್ನ ಗದಗ ಐಪಿಪಿಬಿ ಮ್ಯಾನೇಜರ್ ಆನಂದ ಸಾಗರ, ಗದಗ ಉಪ ವಿಭಾಗದ ಸಹಾಯಕ ಅಧೀಕ್ಷಕರಾದ ಶ್ರೀಕಾಂತ ಜಾದವ, ರೋಣ ಉಪ ವಿಭಾಗದ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿದರು. ಪ್ರಶಸ್ತಿ ಪುರಸ್ಕೃತರ ಪರವಾಗಿ ಬಸವರಾಜ ಮಡಿವಾಳರ ಮಾತನಾಡಿದರು.

ಇದೇ ವೇಳೆ ಅಂಚೆ ಪೇದೆ ಸೇವೆಯಿಂದ ಪದೋನ್ನತಿ ಪಡೆದ ಸರೋಜಾ ಪಟ್ಟಣಶೆಟ್ಟಿ ಅವರನ್ನು ಸನ್ಮಾನಿಸಿ, ಗೌರವಿಸಿಲಾಯಿತು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕರಾದ ವಿ. ಸುನೀಲಕುಮಾರ ಪಾಲ್ಗೊಂಡಿದ್ದರು. ಅೀತಾ ಕುರಿ ಸ್ವಾಗತಿಸಿದರು. ಅಂಚೆ ಸಹಾಯಕ ಬಸವರಾಜ ಶೇಡದ, ಶ್ರೀದೇವಿ ಕಲಕೇರಿ ನಿರೂಪಿಸಿದರು. ಭೀಮಣ್ಣ ದೊಡ್ಡಮನಿ ವಂದಿಸಿದರು.

## ಚಿದಂಬರೇಶ್ವರ ಜಯಂತ್ಯುತ್ಸವ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಿರೇಬಣದಲ್ಲಿರುವ ಜೀರ್ಣೋದ್ಧಾರಗೊಂಡ ನೂತನ ಚಿದಂಬರೇಶ್ವರ ದೇವಸ್ಥಾನದಲ್ಲಿ ಮಂಗಳವಾರ ಚಿದಂಬರೇಶ್ವರ ಜಯಂತ್ಯುತ್ಸವವನ್ನು ಸಂಪ್ರದಾಯದಂತೆ ಅದ್ದೂರಿಯಾಗಿ ಆಚರಿಸಲಾಯಿತು.

ಮುಂಜಾನೆ ಕಾಕಡಾರತಿಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮಗಳು ಅಗಡಿಯ ಪೂಜ್ಯ ಶ್ರೀ ಶ್ರೀಧರ ಚರ್ಕವರ್ತಿ ಹಾಗೂ ದೇವಸ್ಥಾನದ ಧರ್ಮದರ್ಶಿ ಪ್ರಕಾಶ್ ಕುಲಕರ್ಣಿ ಇವರ ಉಪಸ್ಥಿತಿಯಲ್ಲಿ, ಪ್ರಸನ್ನ ಜೋಶಿ, ಅನಂತಭಟ್ ಜೋಶಿ, ನರಸಿಂಹ ಭಟ್ ಜೋಶಿ, ನಾಗರಾಜ ಪೂಜಾರ, ಚಿಕ್ಕರಸ ಪೂಜಾರ, ಶ್ರೀಕಾಂತ ಪೂಜಾರ, ರಾಘವೇಂದ್ರ ಪೂಜಾರ ಇವರ ನೇತೃತ್ವದಲ್ಲಿ ಚಿದಂಬರ ಸ್ವಾಮಿಗೆ ರುದ್ರಾಭಿಷೇಕವನ್ನು ನೆರವೇರಿಸಲಾಯಿತು.

ಮಧ್ಯಾಹ್ನ 12 ಗಂಟೆಗೆ ಚಿದಂಬರೇಶ್ವ ತೊಟ್ಟಿಲೋತ್ಸವ ಕಾರ್ಯಕ್ರಮವು ಸುಮಂಗಲೆಯರು ಹಾಗೂ ಮಹಿಳಾ ಭಜನಾ ಮಂಡಳಿಯ ಸದಸ್ಯರ ಸಮ್ಮುಖದಲ್ಲಿ ಧಾರ್ಮಿಕ ಪದ್ಧತಿಯಂತೆ ವಿಧಿವತ್ತಾಗಿ ನಡೆಸಲಾಯಿತು. ನಂತರ ಮಹಾಮಂಗಳಾರತಿ, ಭಜನೆಗಳು ಜರುಗಿದವು. ಸಂಜೆ 6 ಗಂಟೆಗೆ ದೇವಸ್ಥಾನದ ಆವರಣದಲ್ಲಿ ಕಾರ್ತಿಕೋತ್ಸವ ಮತ್ತು ಅಷ್ಟಾವಧಾನ ಕಾರ್ಯಕ್ರಮವು ಅದ್ದೂರಿಯಾಗಿ ಜರುಗಿತು. ಈ ಸಂದರ್ಭದಲ್ಲಿ ಸಾಂಪ್ರದಾಯಿಕ ಭಜನೆ, ಸಂಗೀತ ಸೇವೆಗಳು ನಡೆದವು. ದೇವಸ್ಥಾನದ ಧರ್ಮದರ್ಶಿ ಪ್ರಕಾಶ ಕುಲಕರ್ಣಿ, ಚಿಕ್ಕಣ್ಣ ಜೋಶಿ, ಪ್ರಸನ್ನ ಕುಲಕರ್ಣಿ ಧನಲಕ್ಷ್ಮೀ ಕುಲಕರ್ಣಿ, ಗೋಪಾಲ ಪಡ್ನೀಸ್, ವೆಂಕಟೇಶ ಗುಡಿ, ಕೆ.ಎಸ್. ಕುಲಕರ್ಣಿ, ಅರವಿಂದ ದೇಶಪಾಂಡೆ, ಗುರರಾಜ ಪಾಟೀಲಕುಲಕರ್ಣಿ, ಶ್ವೇತಾ ಜೋಶಿ, ಮಹಾದೇವಗೌಡ ಪಾಟೀಲ, ಯಲ್ಲಪ್ಪ ಮಾಚೇನಹಳ್ಳಿ, ರಾಜು ಕಳ್ಳಿ ಮುಂತಾದವರಿದ್ದರು.

## ಪಾರಂಪರಿಕ ಕಣ್ಣಿನ ಔಷಧಿ ವಿತರಣೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ಕರ್ನಾಟಕ ಗ್ರಾಮಿಣಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸೇವಾ ಸಂಸ್ಥೆ, ಯೋಗ ಸಾಧಕರ ಸಮಿತಿಗಳ ಆಶ್ರಯದಲ್ಲಿ ನ.14ರಂದು ಪಟ್ಟಣದ ವಿನಾಯಕ ನಗರದ ಚಂಬಣ್ಣ ಬಾಳಿಕಾಯಿ ಅವರ ಜೀನಿನಲ್ಲಿ ಪಾರಂಪರಿಕ ಅನುಭವಿ ವೈದ್ಯರಿಂದ ಕಣ್ಣಿನ ಹಲವು ಸಮಸ್ಯೆ ಗುಣಪಡಿಸಲು ಸಿದ್ಧಪಡಿಸಿದ ಹನಿ ಹಾಕಲಾಗುವುದು.

ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್ ರಾಜ್ಯ ಪ್ರಧಾನ ಕಾರ್ಯದರ್ಶಿ ವೈದ್ಯ ಎಚ್.ಡಿ. ಪೂಜಾರ ಮತ್ತು ಗದಗ ಜಿಲ್ಲಾಧ್ಯಕ್ಷರಾದ ಶಿವಲೀಲಾ ಪಾಟೀಲ ನೇತೃತ್ವದಲ್ಲಿ ಈ ಸೇವಾ ಕಾರ್ಯಕ್ರಮ ನಡೆಯಲಿದೆ. ಪ್ರತಿ ತಿಂಗಳ 2ನೇ ಶುಕ್ರವಾರ ಮತ್ತು 4ನೇ ಶುಕ್ರವಾರ ಲಕ್ಷ್ಮೇಶ್ವರದಲ್ಲಿ ಕಣ್ಣಿಗೆ ಹನಿ ಹಾಕಲಾಗುವದು. ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘದ ತಾಲೂಕಾಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ತಿಳಿಸಿದ್ದಾರೆ.

## ಪೂರ್ವಭಾವಿ ಸಭೆ ನ. 15ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ತ ಪೂರ್ವಭಾವಿಯಾಗಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿ ಸಭೆಯನ್ನು ನವೆಂಬರ್ 15ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕು ಮಟ್ಟದ ಕ್ರೀಡಾಕೂಟ ಯಶಸ್ವಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವಾಲಯ, ಮೇರಾ ಯುವ ಭಾರತ ಗದಗ ಘಟಕ ಹಾಗೂ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯ ಲಕ್ಷ್ಮೇಶ್ವರದ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗ ಮತ್ತು ಎನ್‌ಎಸ್‌ಎಸ್ ಘಟಕಗಳ ಸಹಯೋಗದಲ್ಲಿ ಲಕ್ಷ್ಮೇಶ್ವರ ಪಟ್ಟಣದಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟ ನೆರವೇರಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ಯುವಕರಲ್ಲಿ ಕ್ರೀಡಾ ಚಟುವಟಿಕೆಗಳು ಕೇವಲ ಶಾರೀರಿಕ ಆರೋಗ್ಯವನ್ನಷ್ಟೇ ಅಲ್ಲದೆ ಮಾನಸಿಕ ಸಮತೋಲನ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಮಹತ್ವದ ಸಾಧನವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ. ಎಸ್.ಎಫ್. ಕೊಡ್ಲಿ ಮಾತನಾಡಿ, ಕ್ರೀಡೆಯಲ್ಲಿ ಗೆಲುವು-ಸೋಲು ಅಷ್ಟೇ ಮುಖ್ಯವಲ್ಲ, ಸ್ಪರ್ಧೆಯ ಆತ್ಮಭಾವವೇ ನಿಜವಾದ ಜಯ ಎಂದು ಪ್ರೋತ್ಸಾಹಿಸಿದರು.


ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ, ಮೇರಾ ಯುವ ಭಾರತ (MY Bharat) ಗದಗ ಘಟಕದ ಪ್ರತಿನಿಧಿಗಳಾದ ರವಿ ಹೊಂಬಾಳಿ ಮತ್ತು ಹನುಮಂತ ಹಳ್ಳೂರ ಮಾತನಾಡಿದರು.

ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ವಿಜೇತರಾದ ಮತ್ತು ಪಾಲ್ಗೊಂಡ ಎಲ್ಲ ಕ್ರೀಡಾಪಟುಗಳಿಗೆ ಪ್ರಶಸ್ತಿ ಪತ್ರ ಮತ್ತು ಟ್ರೋಫಿಗಳನ್ನು ವಿತರಿಸಲಾಯಿತು.



ಗದಗ ನಗರದಲ್ಲಿ ಪ್ರಪ್ರಥಮ ಬಾರಿಗೆ ನಡೆಯುತ್ತಿರುವ 9 ಅಗ್ನಿಕುಂಡಗಳ ಅತಿರುದ್ರ ಮಹಾಯಜ್ಞ ಹಾಗೂ ಕಿರಿಯ ಕುಂಭಮೇಳದ ಅಂಗವಾಗಿ ಆಯೋಜಿಸಲಾಗಿದ್ದ ಕುಂಭ ಮೆರವಣಿಗೆಯಲ್ಲಿ ಸಾವಿರಾರು ಭಕ್ತರು ನಗರದ ತ್ರಿಕೂಟೇಶ್ವರ ದೇವಸ್ಥಾನದಿಂದ ವಿದ್ಯಾದಾನ ಸಮಿತಿ ಮೈದಾನದವರೆಗೆ ಪೂರ್ಣಕುಂಭದೊಂದಿಗೆ ಸಡಗರ ಸಂಭ್ರಮದಿಂದ ಭಾಗವಹಿಸಿದರು.

ಗದಗ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಯಲ್ಲಿ ಗದಗ ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾಗಿ ಆಯ್ಕೆಯಾದ ಮೌನೇಶ ಸಿ. ಬಡಿಗೇರ(ನರೇಗಲ್ಲ) ಇವರಿಗೆ ಶ್ರೀಗುರೂಜಿ ಸಾಂಸ್ಕೃತಿಕ ಸಂಘದ ಕಾರ್ಯಾಧ್ಯಕ್ಷರು ಹಾಗೂ ಜಿಲ್ಲಾ ಮನ್ ಕಿ ಬಾತ್ ಸಂಚಾಲಕರಾದ ರಾಚಯ್ಯ ಹೊಸಮಠ ಮತ್ತು ಅವಿನಾಶ ಹೊನಗುಡಿ ಅವರು ಸನ್ಮಾನಿಸಿ ಅಭಿನಂದಿಸಿದರು.



## ಉಚಿತ ಫುಡ್ ಲೈಸೆನ್ಸ್ ಅರ್ಜಿಗೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತಿಯ ಆಹಾರ ಪ್ರಾಧಿಕಾರದಿಂದ ಬೀದಿ ವ್ಯಾಪಾರಿಗಳಿಗೆ ನ. 14ರವರೆಗೆ ಗದಗ ಜಿಲ್ಲಾ ಬೀದಿ ವ್ಯಾಪಾರಿಗಳ ಸಂಘದ ಕಾರ್ಯಾಲಯದಲ್ಲಿ ಗದಗ ಎಫ್‌ಎಸ್‌ಎಸ್‌ಎಐ ಅಧಿಕಾರಿಗಳ ಸಹಯೋಗದೊಂದಿಗೆ ಉಚಿತವಾಗಿ ಫುಡ್ ಲೈಸನ್ಸ್ ಮಾಡಲಾಗುತ್ತಿದೆ.

ಹಣ್ಣು-ತರಕಾರಿ, ಫಾಸ್ಟ್‌ಫುಡ್, ಗೋಬಿ ಮಂಚೂರಿ, ಚಿಕನ್ ಕಬಾಬ್, ಎಗ್‌ರೈಸ್ ಸೇರಿದಂತೆ ಬೀದಿ ವ್ಯಾಪಾರಿಗಳಿಗಾಗಿ ಸರ್ಕಾರ ಉಚಿತ ಸೌಲಭ್ಯ, 10 ಲಕ್ಷ ರೂಪಾಯಿವರೆಗಿನ ಲೈಸನ್ಸ್ ಪರವಾನಿಗೆ ನೀಡುತ್ತಿದ್ದು, ಬೀದಿ ವ್ಯಾಪಾರಿಗಳು ಗದಗ ನಗರದ ತಿಲಕ್ ಪಾರ್ಕ್ ಹತ್ತಿರವಿರುವ ನಗರಸಭೆ ಕಾಂಪ್ಲೆಕ್ಸ್‌ನಲ್ಲಿನ ಸಂಘದ ಕಾರ್ಯಾಲಯದಲ್ಲಿ ಉಚಿತ ಅರ್ಜಿ ಹಾಕಲು 2 ಫೋಟೋ, ಆಧಾರ್ ಕಾರ್ಡ್ ಝುರಾಕ್ಸ ತರಬೇಕು ಎಂದು ಸಂಘದ ಅಧ್ಯಕ್ಷ ಮಕ್ತುಮಸಾಬ ನಾಲಬಂದ ಹಾಗೂ ಪದಾಧಿಕರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ವಿಶೇಷ ಕಮ್ಮಟ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ ಬೆಂಗಳೂರು ಇವರ ಸಹಯೋಗದಲ್ಲಿ ಅ.ವಿ.ವಿ.ಪ್ರ ಸಮಿತಿಯ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ, ವಾಣಿಜ್ಯ, ಬಿಸಿಎ ಹಾಗೂ ಸ್ನಾತಕೋತ್ತರ ಕೇಂದ್ರ ನರೇಗಲ್ಲದ ಐ.ಕ್ಯು.ಎ.ಸಿ. ಹಾಗೂ ಕನ್ನಡ ವಿಭಾಗದ ವತಿಯಿಂದ 'ಆಧುನಿಕ ಕರ್ನಾಟಕ ನಿರ್ಮಾಣ: ಗದಗ ಜಿಲ್ಲೆಯ ಕೊಡುಗೆ' ಕುರಿತು ಒಂದು ದಿನದ ರಾಜ್ಯ ಮಟ್ಟದ ವಿಶೇಷ ಕಮ್ಮಟವನ್ನು ನರೇಗಲ್ಲದ ಮಹಾವಿದ್ಯಾಲಯದ ಸಭಾಭವನದಲ್ಲಿ ನವೆಂಬರ್ 21ರಂದು ಬೆಳಿಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.


ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನರೇಗಲ್ಲದ ಎಸ್.ಎ. ಪದವಿ ಕಾಲೇಜಿನ ಪ್ರಾಚಾರ್ಯ ಪ್ರೊ. ಎಸ್.ಜಿ. ಕೇಶಣ್ಣವರ ಅಧ್ಯಕ್ಷತೆ ವಹಿಸುವರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರಾದ ದಾಕ್ಷಾಯಣಿ ಹುಡೇದ ಉಪಸ್ಥಿತರಿರುವರು.

ನಿವೃತ್ತ ಪ್ರಾಂಶುಪಾಲ ಹೊಳಿಯಪ್ಪ ಯಲಬುರ್ಗಿ ಸಹಕಾರಿ ಕ್ಷೇತ್ರ ಮತ್ತು ಗದಗ ಜಿಲ್ಲೆ ಕುರಿತು ವಿಶೇಷ ಉಪನ್ಯಾಸ ನೀಡುವರು.

ಮಧ್ಯಾಹ್ನ 12ರಿಂದ 1.30 ಗಂಟೆಗೆ ಗೋಷ್ಠಿ-1, ಮಧ್ಯಾಹ್ನ 2.30 ಗಂಟೆಯಿಂದ ಮಧ್ಯಾಹ್ನ 4 ಗಂಟೆಯವರೆಗೆ ಗೋಷ್ಠಿ-2, ಮಧ್ಯಾಹ್ನ 4 ಗಂಟೆಯಿಂದ 4.30 ಗಂಟೆಯವರೆಗೆ ಸಂವಾದ ಕಾರ್ಯಕ್ರಮ ಜರುಗಲಿವೆ. ಮಧ್ಯಾಹ್ನ 4.30ರಿಂದ ಸಂಜೆ 5.30 ಗಂಟೆಯವರೆಗೆ ಸಮಾರೋಪ ಸಮಾರಂಭ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

## ನಿಧನ

### ಮೈಲಾರಪ್ಪ ಕೆಂಗಾರ



**ನರೇಗಲ್ಲ:** ಸಮೀಪದ ಅಬ್ಬಿಗೇರಿ ಗ್ರಾಮದ ನಿವಾಸಿ ಮೈಲಾರಪ್ಪ ಫಕೀರಪ್ಪ ಕೆಂಗಾರ (75) ಬುಧವಾರ ನಿಧನ ಹೊಂದಿದರು. ಅವರಿಗೆ ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

### ಪುಷ್ಪಾವತಿ ದಾಸಪ್ಪನವರ



**ಲಕ್ಷ್ಮೇಶ್ವರ:** ಪಟ್ಟಣದ ಹಿರಿಯರು ಹಾಗೂ ಸಮಾಜ ಸೇವಕಿಯಾಗಿದ್ದ ಪುಷ್ಪಾವತಿ ಗುಡ್ಡಪ್ಪ ದಾಸಪ್ಪನವರ (74) ಅವರು ನ. 11ರಂದು ನಿಧನರಾಗಿದ್ದಾರೆ. ಮೃತರಿಗೆ ಅಣ್ಣಿಗೇರಿಯ ತಹಸೀಲ್ದಾರ ಮಂಜುನಾಥ ದಾಸಪ್ಪನವರ ಸೇರಿ ಇಬ್ಬರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವಿದೆ.

### ಮಕ್ಕಳು, ಯುವ ಜನರ ಕಲಾಪ್ರತಿಭೆಯನ್ನು ಗುರುತಿಸಿ ಉತ್ತೇಜನ ನೀಡಲು ಸ್ಪರ್ಧೆ

# ಕಲಾ ಪ್ರತಿಭೋತ್ಸವ ಸ್ಪರ್ಧೆಗೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡಲು ಹಾಗೂ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸ್ಪರ್ಧೆಗೆ ಅರ್ಜಿ ಆಹ್ವಾನಿಸಲಾಗಿದೆ.

ಏಕ ವ್ಯಕ್ತಿ ಸ್ಪರ್ಧೆಗಳು: ಬಾಲ ಪ್ರತಿಭೆ ಸ್ಪರ್ಧೆಗೆ 8ರಿಂದ 14 ವರ್ಷದೊಳಗಿನ ಹಾಗೂ ಕಿಶೋರ ಪ್ರತಿಭೆಗೆ 14ರಿಂದ 18 ವರ್ಷದೊಳಗಿನ ಮಕ್ಕಳು ಭಾಗವಹಿಸಬಹುದು. ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಹಿಂದೂಸ್ತಾನಿ/ ಕರ್ನಾಟಕ ವಾದ್ಯ ಸಂಗೀತ ಹಾಗೂ ಹಿಂದೂಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಾಪ್ರಕಾರ ಜರುಗಲಿವೆ.

ಯುವ ಪ್ರತಿಭೆ ಸ್ಪರ್ಧೆ: 18ರಿಂದ 30 ವರ್ಷದೊಳಗಿನವರು ಭಾಗವಹಿಸಬಹುದು. ನನ್ನ ನೆಚ್ಚಿನ ಸಾಹಿತಿ (ಆಶುಭಾಷಣ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಹಿಂದೂಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ, ಚಿತ್ರಕಲೆ ಹಾಗೂ ಹಿಂದೂಸ್ತಾನಿ/ಕರ್ನಾಟಕ ವಾದ್ಯ ಸಂಗೀತ ಕಲಾಪ್ರಕಾರಗಳಿಗೆ ಸ್ಪರ್ಧೆ ಜರುಗಲಿದೆ.

ಸಮೂಹ ಸ್ಪರ್ಧೆ: ಸಮೂಹ ಸ್ಪರ್ಧೆಯಲ್ಲಿ ನಾಟಕ ಪ್ರದರ್ಶಿಸಬಹುದು, 10ರಿಂದ 15 ಜನ ತಂಡದ ಸದಸ್ಯರು ಭಾಗವಹಿಸಬಹುದು. ಸ್ಪರ್ಧಿಗಳು ಸ್ವ-ವಿವರದ ಅರ್ಜಿ ಸಲ್ಲಿಸಲು ಕೊನೆಯ ದಿನ ನವೆಂಬರ್ 24 ಆಗಿದ್ದು, ಸ್ಪರ್ಧೆಗಳಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಶಾಲೆಯಿಂದ/ ಕಾಲೇಜಿನಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯಿತಿ, ನಗರಸಭೆ, ಪುರಸಭೆ/ ಪಾಲಿಕೆ ಕಚೆರಿಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸಬೇಕು.

ಸ್ಪರ್ಧೆಯ ಸಂಭವನೀಯ ದಿನಾಂಕ 28-11-2025 ಮತ್ತು 29-11-2025 ಆಗಿರುತ್ತದೆ. ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಪ್ರಥಮ/ ದ್ವಿತೀಯ ಸ್ಥಾನ ಪಡೆದ ಅಭ್ಯರ್ಥಿಗಳು/ತಂಡವನ್ನು ವಲಯ ಮಟ್ಟದ ಸ್ಪರ್ಧೆಗೆ ಹಾಗೂ ವಲಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದವರನ್ನು ರಾಜ್ಯ ಮಟ್ಟದ ಸ್ಪರ್ಧೆಗಳಿಗೆ ಆಯ್ಕೆ ಮಾಡಲಾಗುವುದು. ರಾಜ್ಯ ಮಟ್ಟದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನದಲ್ಲಿ ವಿಜೇತರಾದವರಿಗೆ ನಗದು ಬಹುಮಾನ ನೀಡಲಾಗುವುದು.

ತೀರ್ಪುಗಾರರ ತೀರ್ಮಾನವೇ ಅಂತಿಮ. ಸ್ಪರ್ಧೆಗೆ ಬೇಕಾಗುವ ವಾದ್ಯ ಪರಿಕರಗಳನ್ನು ಸ್ಪರ್ಧಾಗಳುಗಳೇ ತರುವುದು. ಒಬ್ಬ ಸ್ಪರ್ಧಿಯು ಒಂದಕ್ಕಿಂತ ಹೆಚ್ಚಿನ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿವರವನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ-103, ಗದಗ ಈ ಕಚೇರಿಗೆ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ-08372-221864 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ನ. 16ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಾಲಾಜಿ ಆಸ್ಪತ್ರೆಯ ಸಭಾಭವನದಲ್ಲಿ ನ. 16ರಂದು ಬೆಳಿಗ್ಗೆ 10ಕ್ಕೆ 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರಕಾರ ಹಾಗೂ ಆಯುಷ್ ಇಲಾಖೆ, ಆಯುಷ್ ಮಂತ್ರಾಲಯ, ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯ ಬೆಂಗಳೂರು, ಉಜಿರೆಯ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ವಿಜ್ಞಾನಗಳ ಮಹಾವಿದ್ಯಾಲಯ ಮತ್ತು ಆಸ್ಪತ್ರೆಗಳು, ಭಾರತೀಯ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಪದವೀಧರರ ಸಂಘದ ಸಂಯುಕ್ತಾಶ್ರಯದಲ್ಲಿ ಪ್ರಕೃತಿ ದಿನಾಚರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಪ್ರಕೃತಿ ಚಿಕಿತ್ಸೆಯ ಮಹತ್ವ ಮತ್ತು ಪ್ರಯೋಜನಗಳ ಬಗ್ಗೆ ಮಾಹಿತಿ ನೀಡಲಾಗುವದು.


ಕಾರ್ಯಕ್ರಮವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸಲಿದ್ದು, ಗದಗ ನಗರದ ಖ್ಯಾತ ಪ್ರಕೃತಿ ಚಿಕಿತ್ಸಾ ತಜ್ಞ ವೈದ್ಯ ಡಾ. ಸತೀಶ ಹೊಂಬಾಳಿ, ವರ್ತಕ ಬಸವರಾಜ ಮಹಾಂತಶೆಟ್ಟರ, ಅಗಡಿ ಆಸ್ಪತೆಯ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯೆ ಡಾ. ಶೃತಿ ಹೂವಿನ್, ಡಾ. ಬಸವರಾಜ ಹಂಡಿ, ಡಾ. ಶೋಭಿತಾ ತಂತ್ರಿ, ಪ್ರಜ್ವಲ್ ಹಿರೇಮಠ, ಕಾವ್ಯಾ ಪೂಜಾರ, ಕೀರ್ತಿ ಕೆ ಮುಂತಾದವರು ಆಗಮಿಸಲಿದ್ದು, ಪಟ್ಟಣದ ನಿವೃತ್ತ ನೌಕರರು ಮತ್ತು ಹಿರಿಯರ ನಾಗರಿಕರ ವೇದಿಕೆ, ಮಹಿಳಾ ಸಂಘಟನೆಗಳ ಮುಖ್ಯಸ್ಥರು ಪಾಲ್ಗೊಳ್ಳಲಿದ್ದಾರೆ. ಸಾರ್ವಜನಿಕರು ಆಗಮಿಸಿ ಕಾರ್ಯಕ್ರಮದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಂಘಟಕರು ತಿಳಿಸಿದ್ದಾರೆ.

### ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ವರ್ಗಾವಣೆಗೆ ಆಗ್ರಹಿಸಿ ಹಿಂದೂ ಸಂಘಟನೆಗಳಿಂದ ಜಿಲ್ಲಾಧಿಕಾರಿಗೆ ಮನವಿ

# ಹಿಂದೂಗಳ ಮೇಲಿನ ದೌರ್ಜನ್ಯ ಹೆಚ್ಚಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ವಿರೋಧಿ ನೀತಿ ಅನುಸರಿಸುತ್ತಿರುವ ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಅವರನ್ನು ಜಿಲ್ಲೆಯಿಂದ ಬೇರೆ ವಿಭಾಗಕ್ಕೆ ವರ್ಗಾಯಿಸಿ ಸೂಕ್ತ ಕ್ರಮ ಜರುಗಿಸುವಂತೆ ಆಗ್ರಹಿಸಿ ವಿವಿಧ ಹಿಂದೂ ಸಂಘಟನೆಗಳ ನೂರಾರು ಕಾರ್ಯಕರ್ತರು ಗದುಗಿನಲ್ಲಿ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ ರಾಜೂ ಖಾನಪ್ಪನವರ, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಸ್ತಿತ್ವಕ್ಕೆ ಬಂದ ನಂತರ ಹಿಂದೂಗಳ ಮೇಲೆ ದೌರ್ಜನ್ಯ ಹೆಚ್ಚಿದೆ. ಸರಕಾರ ಹಿಂದೂಗಳ ಮೇಲೆ ವಿವಿಧ ಸುಳ್ಳು ಪ್ರಕರಣಗಳನ್ನು ದಾಖಲಿಸುವ ಮೂಲಕ ಹಿಂದುಗಳನ್ನು ಸದೆಬಡಿಯಲು ಪ್ರಯತ್ನಿಸುತ್ತಿದೆ. ಜಿಲ್ಲೆಯಾದ್ಯಂತ ಮುಗ್ಧ ಹಿಂದೂಗಳು ಸರಕಾರಿ ಅಧಿಕಾರಿಗಳ ದೌರ್ಜನ್ಯದಿಂದ ನಲುಗಿದ್ದಾರೆಂದು ಆರೋಪಿಸಿದರು.

ದಿ.10ರಂದು ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಸುಮ್ಮನೆ ಮನೆಯಲ್ಲಿದ್ದ ದೇವಿಹಾಳ ತಾಂಡಾದ ಸೋಮಪ್ಪ ಲಮಾಣಿ ಎಂಬ ವ್ಯಕ್ತಿಯ ಮೇಲೆ ಸುಳ್ಳು ಪ್ರಕರಣ ದಾಖಲಿಸಿ ಮನಸೋಇಚ್ಛೆ ಥಳಿಸಿದ್ದಾರೆ. ಈ ಅಧಿಕಾರಿಯ ಥಳಿತದಿಂದ ಸೋಮಪ್ಪ ಲಮಾಣಿಯ ಮರ್ಮಾಂಗಕ್ಕೆ ತೀವ್ರವಾಗಿ ಗಾಯವಾಗಿದೆ. ಪಿಎಸ್ಐ ಈರಣ್ಣ ರಿತ್ತಿ ಜಾತಿ ನಿಂದನೆ ಮಾಡಿ ಸಮಸ್ತ ಲಂಬಾಣಿ ಜನಾಂಗವನ್ನು ಅವಮಾನಿಸಿದ್ದಾರೆಂದು ಆರೋಪಿಸಿದರು.

ಕಳೆದ ವರ್ಷದ ನವರಾತ್ರಿ ಉತ್ಸವದ ಸಂದರ್ಭದಲ್ಲಿ ಇದೇ ಅಧಿಕಾರಿ ಲಕ್ಷ್ಮೇಶ್ವರದಲ್ಲಿ ಶಾಂತಿಯುತವಾಗಿ ದುರ್ಗಾ ಮೂರ್ತಿಯನ್ನು ವಿಸರ್ಜನೆ ಮಾಡಿ ಮನೆಗೆ ವಾಪಸ್ಸಾಗುತ್ತಿದ್ದ ಮುಗ್ಧ ಗೋಸಾವಿ ಜನಾಂಗದವರ ಮೇಲೆ ಲಾಠಿ ಚಾರ್ಜ್ ನಡೆಸಿ ಹಲ್ಲೆ ನಡೆಸಿದ್ದರು. ಇದನ್ನು ಖಂಡಿಸಿ ವಿವಿಧ ಹಿಂದೂ ಸಂಘಟನೆಗಳು ಪ್ರತಿಭಟನೆ ನಡೆಸಿದಾಗ ಅಂದಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಬೆಳಗಾವಿಗೆ ವರ್ಗಾಯಿಸಿದ್ದರು. ಈ ಹಿಂದೆಯೂ ಸಹ ಶಿರಹಟ್ಟಿಯಲ್ಲಿ ಅನೇಕ ವರ್ಷಗಳ ಕಾಲ ಕಾರ್ಯನಿರ್ವಹಿಸಿ ಜನವಿರೋಧಿ, ಹಿಂದೂ ವಿರೋಧಿ ನೀತಿಯನ್ನೇ ಅನುಸರಿಸಿದ್ದಾರೆ.

ಈ ಅಧಿಕಾರಿಗೆ ಶಿರಹಟ್ಟಿ ಹೊರತುಪಡಿಸಿ ಬೇರೆ ಕಡೆಗೆ ನೌಕರಿ ನಡೆಯುವದಿಲ್ಲವೇ, ಪದೇ ಪದೇ ಶಿರಹಟ್ಟಿ ತಾಲೂಕಿಗೆ ಆಗಮಿಸಿ ಅಲ್ಲಿನ ಮುಗ್ಧ ಹಿಂದೂಗಳ ಮೇಲೆ ಕ್ರೌರ್ಯ ನಡೆಸಿ ಯಾರನ್ನು ಸಂತುಷ್ಟಗೊಳಿಸಲು ಹೊರಟಿದ್ದಾರೆಂಬ ಬಗ್ಗೆ ತನಿಖೆಯಾಗಬೇಕೆಂದು ಆಗ್ರಹಿಸಿದರು.


ಸರಕಾರಿ ಅಧಿಕಾರಿಗಳು ಸಮಾಜದ ಸೇವಕರಾಗಿದ್ದಾರೆ. ಸರಕಾರಿ ಅಧಿಕಾರಿಗಳಿಗೆ ಸಾರ್ವಜನಿಕರು ನೀಡುವ ತೆರಿಗೆಯಿಂದಲೇ ಸಂಬಳ, ಸೌಲಭ್ಯಗಳನ್ನು ನೀಡಲಾಗುತ್ತಿದೆ. ಇಂತಹ ಸಂದರ್ಭದಲ್ಲಿಯೂ ಸಹ ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಕಂಡ ಕಂಡವರ ಮೇಲೆ ವಿನಾಕಾರಣ ದೌರ್ಜನ್ಯ ನಡೆಸಿ ಜಾತಿ ನಿಂದನೆ ಮಾಡಲು ಇವರಿಗೆ ಯಾರು ಅಧಿಕಾರ ನೀಡಿದ್ದಾರೆ, ಇವರ ಹಿಂದೆ ನಿಂತು ಹಿಂದೂಗಳನ್ನು ಮಟ್ಟಹಾಕಲು ಹವಣಿಸುತ್ತಿರುವವರು ಯಾರು ಎಂಬ ಬಗ್ಗೆ ಸಮಗ್ರ ತನಿಖೆ ನಡೆಸಬೇಕೆಂದು ರಾಜೂ ಖಾನಪ್ಪನವರ ಆಗ್ರಹಿಸಿದರು.

ಮುಗ್ಧ ಲಂಬಾಣಿ ವ್ಯಕ್ತಿಯ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಜಾತಿ ನಿಂದನೆ ಮಾಡಿರುವ ಜನವಿರೋಧಿ, ಹಿಂದೂ ವಿರೋಧಿ ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಅವರನ್ನು ಜಿಲ್ಲೆಯಿಂದ ವರ್ಗಾಯಿಸಲು ಸರಕಾರಕ್ಕೆ ಶಿಫಾರಸ್ಸು ಮಾಡಬೇಕು. ಏಳು ದಿನದೊಳಗಾಗಿ ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಮೇಲೆ ಯಾವುದೇ ಕ್ರಮ ಜರುಗಿಸದಿದ್ದಲ್ಲಿ ಜಿಲ್ಲೆಯಾದ್ಯಂತ ಉಗ್ರ ಹೋರಾಟ ನಡೆಸುವದಾಗಿ ಎಚ್ಚರಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಈಶ್ವರ ಕಾಟವಾ, ಸಂತೋಷ ಕುರಿ, ಶಿವಯೋಗಿ ಹಿರೇಮಠ, ಕುಮಾರ ನಡಗೇರಿ, ವೆಂಕಟೇಶ ದೊಡ್ಡಮನಿ, ಅಶೋಕ ಭಜಂತ್ರಿ, ಮಹೇಶ ಹೊಸೂರ, ಸಂಜೀವ ಚೆಟ್ಟಿ, ಸತೀಶ ಕುಂಬಾರ, ಕಿರಣ ಹಿರೇಮಠ, ಈರಣ್ಣ ಪೂಜಾರ, ಭರತ್ ಲದ್ದಿ, ಲಕ್ಷ್ಮೇಶ್ವರದ ಗೋಸಾವಿ ಸಮಾಜದ ಬಾಳಪ್ಪ ಗೋಸಾವಿ, ಹರೀಶ ಗೋಸಾವಿ ಮುಂತಾದವರಿದ್ದರು.

### ಅಗಡಿ ಇಂಜಿನಿಯರಿಂಗ್ ಕಾಲೇಜಿನ 22ನೇ ವರ್ಷದ ಸಂಸ್ಥಾಪನಾ ದಿನಾಚರಣೆ ನ.16ಕ್ಕೆ

# ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೂ ತಾಂತ್ರಿಕ ಶಿಕ್ಷಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನ 22ನೇ ವರ್ಷದ ಸಂಸ್ಥಾಪನಾ ದಿನಾಚರಣೆ ನ.16ರಂದು ಬೆಳಿಗ್ಗೆ 11ಕ್ಕೆ ಕಾಲೇಜಿನ ಆವರಣದಲ್ಲಿ ಜರುಗಲಿದೆ ಎಂದು ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ತಿಳಿಸಿದರು.

ಅವರು ಬುಧವಾರ ಕಾಲೇಜಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಮೂಲತಃ ಲಕ್ಷ್ಮೇಶ್ವರದವರೇ ಆದ ದಿ. ವೆಂಕಪ್ಪ ಅಗಡಿ ಅವರು ಗ್ರಾಮೀಣ ಭಾಗದ ಬಡ, ಪ್ರತಿಭಾವಂತ ವಿದ್ಯಾರ್ಥಿಗಳಿಗೂ ಉನ್ನತ ಗುಣಮಟ್ಟದ ತಾಂತ್ರಿಕ, ವಿಜ್ಞಾನ ಶಿಕ್ಷಣ ಸಿಗಬೇಕೆಂಬ ಉದ್ದೇಶ ಮತ್ತು ಹುಟ್ಟಿದೂರಿನ ಅಭಿಮಾನದಿಂದ 2003ರಲ್ಲಿ ಪಟ್ಟಣದಲ್ಲಿ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜನ್ನು ಸ್ಥಾಪಿಸಿದರು. ಕಾಲೇಜಿನಲ್ಲಿ ಪಿಯುಸಿ ಮತ್ತು ವಿವಿಧ ಇಂಜಿನಿಯರಿಂಗ್ ವಿಭಾಗಗಳಲ್ಲಿ ಒಟ್ಟು 2 ಸಾವಿರ ವಿದ್ಯಾರ್ಥಿಗಳು ಅಭ್ಯಸಿಸುತ್ತಿದ್ದಾರೆ.

ಉತ್ತಮ ಕಲಿಕಾ ವಾತಾವರಣ, ಮಹಾನಗರಗಳಲ್ಲಿ ಸಿಗುವ ಎಲ್ಲ ಸೌಲಭ್ಯಗಳೊಂದಿಗೆ ಕಾಲೇಜಿನಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಶಿಕ್ಷಣ ಕೊಡಲಾಗುತ್ತಿದೆ. ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಕಾಲೇಜಿನ ಆಡಳಿತ ಮಂಡಳಿಯಿಂದ ಪ್ರತಿವರ್ಷ 100ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ 20 ಲಕ್ಷ ರೂಗಳ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ದೇಶ-ವಿದೇಶಗಳ ಪ್ರತಿಷ್ಠಿತ ಕಂಪನಿಗಳು ಮತ್ತು ಸಂಸ್ಥೆಯ ವತಿಯಿಂದ 1 ಕೋಟಿ ರೂಗಳಿಗೂ ಅಧಿಕ ಠೇವಣಿ ಹಣದಲ್ಲಿ ಪ್ರತಿ ವರ್ಷ ನೂರಾರು ವಿದ್ಯಾರ್ಥಿಗಳಿಗೆ ಲಕ್ಷಾಂತರ ರೂಗಳ ಸ್ಕಾಲರ್‌ಶಿಪ್ ನೀಡಲಾಗುತ್ತಿದೆ. ಈ ಕಾಲೇಜಿನಲ್ಲಿ ಇಂಜನೀಯರಿಂಗ್ ಪೂರ್ಣಗೊಳಿಸುತ್ತಿದ್ದಂತೆಯೇ ದೇಶದ ಪ್ರತಿಷ್ಠಿತ ಕಂಪನಿಗಳಲ್ಲಿ 4 ರಿಂದ 6 ಲಕ್ಷ ರೂವರೆಗಿನ ವಾರ್ಷಿಕ ವೇತನದೊಂದಿಗೆ ಉದ್ಯೋಗಕ್ಕೆ ಸೇರಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಪಿಯು ಕಾಲೇಜ್ ಪ್ರಾಚಾರ್ಯೆ ಶುಭಾ ಡಿ, ಆಡಳಿತಾಧಿಕಾರಿ ಪ್ರೊ. ವಿಕ್ರಮ ಶಿರೋಳ, ಪ್ರೊ. ಆರ್. ಎಂ. ಪಾಟೀಲ, ಡಾ. ಸುಭಾಸ ಮೇಟಿ, ರವಿ ಪ್ರಕಾಶ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಎಸ್.ಎಫ್. ಕೊಡ್ಲಿ ಹಾಜರಿದ್ದರು.

ಸಂಸ್ಥಾಪನಾ ದಿನಾಚರಣೆಗೆ ಮುಖ್ಯ ಅತಿಥಿಗಳಾಗಿ ಯುಎಸ್‌ಎನ ಗೋಕರೆ ಕಾನೂನು ಸಂಸ್ಥೆ ಮತ್ತು ಗೋಕರೆ ಎಲ್‌ಪಿಓ ಪ್ರೈ.ಲಿನ ಸಂಸ್ಥಾಪಕ ಮತ್ತು ವ್ಯವಸ್ಥಾಪಕ ಪಾಲುದಾರರಾದ ಮಂಜುನಾಥ ಗೋಕರೆ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಅಮೇರಿಕಾದಲ್ಲಿರುವ ಸಂಸ್ಥೆಯ ಅಧ್ಯಕ್ಷ ಹರ್ಷವರ್ಧನ ಅಗಡಿ ವಹಿಸುವರು. ಉಪಾಧ್ಯಕ್ಷೆ ಗೀತಾ ಅಗಡಿ ಮತ್ತು ಕಾಲೇಜಿನ ಆಡಳಿತ ಮಂಡಳಿ ನಿರ್ದೇಶಕರು, ಸದಸ್ಯರು, ಪಾಲಕರು, ಗೌರವಾನ್ವಿತರು ಉಪಸ್ಥಿತರಿರುವರು. ಈ ವೇಳೆ ಜೋರಿಯೆಂಟ್ ಲ್ಯಾಬ್ ಉದ್ಘಾಟನೆ ಹಾಗೂ ವಿದ್ಯಾರ್ಥಿಗಳಿಂದ ಪ್ರೊಜೆಕ್ಟ್‌ಗಳ ಪ್ರದರ್ಶನ ನಡೆಯಲಿದೆ ಎಂದು ಡಾ. ಪರಶುರಾಮ ಬಾರಕಿ ತಿಳಿಸಿದರು.




ಬೆಳಗಾವಿ: ಭಾರತೀಯ ಟೆಲಿಕಾಂ ಮಜ್ದೂರ್ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನ್ಯಾಯಯುತ ಹಕ್ಕುಗಳಿಗಾಗಿ ಪ್ರತಿಭಟನೆ ನಡೆಸಲಾಯಿತು. ಹೊಸ ಕಂಟ್ರಾಕ್ಟರ ಅಧಿಕಾರ ವಹಿಸಿಕೊಂಡ ನಂತರ ಅನೇಕ ಕಾರ್ಮಿಕರನ್ನು ಕೆಲಸದಿಂದ ವಜಾಗೊಳಿಸಿದ್ದಾರೆ ಎಂದು ಆರೋಪಿಸಲಾಯಿತು. ಕೂಡಲೇ ಈ ಕುರಿತು ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಯಿತು.

# ಅಹೋರಾತ್ರಿ ಪ್ರತಿಭಟನೆ ಅಂತ್ಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಮಾಯಕರ ಮೇಲೆ ಹಲ್ಲೆ ನಡೆಸಿದ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಮಂಗಳವಾರ ರಾತ್ರಿಯಿಂದ ಶಿರಹಟ್ಟಿ ಪೊಲೀಸ್ ಠಾಣೆ ಎದುರುಗಡೆ ನಡೆಯುತ್ತಿದ್ದ ಅಹೋರಾತ್ರಿ ಪ್ರತಿಭಟನೆಯು ಬುಧವಾರ ಸಂಜೆ ತಹಸೀಲ್ದಾರ ರಾಘವೇಂದ್ರರಾವ್ ಕೆ ಅವರಿಗೆ ಮನವಿ ಸಲ್ಲಿಸುವುದರ ಮೂಲಕ ಅಂತ್ಯವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಿವು ಲಮಾಣಿ, ನಾಗರಾಜ ಲಕ್ಕುಂಡಿ, ಶಂಕರ ಮರಾಠೆ, ಘಟನೆಗೆ ಸಂಬಂಧಿಸಿದಂತೆ ಈಗಾಗಲೇ ಪ್ರಕರಣ ದಾಖಲಿಸಿದ್ದು, ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿತರಾದ ಪಿಎಸ್ಐ ಈರಪ್ಪ ರಿತ್ತಿ ಮತ್ತು ಪೊಲೀಸ್ ಸಿಬ್ಬಂದಿಗಳಾದ ಮೇಘರಾಜ್, ಮಲ್ಲಿಕಾರ್ಜುನ ವಡ್ಡರ ಇವರನ್ನು ಕೂಡಲೇ ಬಂಧಿಸಿ ತ್ವರಿತಗತಿಯಲ್ಲಿ ಪ್ರಕರಣವನ್ನು ಕೈಗೊಂಡು ಕಾನೂನಾತ್ಮಕವಾಗಿ ಕ್ರಮ ಜರುಗಿಸಿ ಹಲ್ಲೆಗೊಳಗಾದವರಿಗೆ ಕೂಡಲೇ ನ್ಯಾಯವನ್ನು ಒದಗಿಸಬೇಕು. ನ.17ರ ಸೋಮವಾರದೊಳಗೆ ಕ್ರಮವನ್ನು ಕೈಗೊಳ್ಳದಿದ್ದರೆ ಉಗ್ರ ಹೋರಾಟವನ್ನು ಕೈಗೊಳ್ಳುತ್ತೇವೆಂದು ಮನವಿಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಡಿ. ಪಲ್ಲೇದ, ಜಾನು ಲಮಾಣಿ, ಶಂಕರ ಮರಾಠೆ, ಫಕ್ಕೀರೇಶ ರಟ್ಟಿಹಳ್ಳಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ನಂದಾ ಪಲ್ಲೇದ, ಪುಂಡಲೀಕ ಲಮಾಣಿ, ಗಂಗಾಧರ ಮೆಣಸಿನಕಾಯಿ ಮುಂತಾದವರು ಉಪಸ್ಥಿತರಿದ್ದರು.



# ನ. 16ರಂದು ಕಾರ್ತಿಕ ದೀಪೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಆರಾಧ್ಯ ದೈವ ಶ್ರೀ ವೀರನಾರಾಯಣ ಮತ್ತು ಕ್ಷೇತ್ರಮೂರ್ತಿ ಶ್ರೀ ಲಕ್ಷ್ಮೀನರಸಿಂಹ ದೇವರ ಪಾವನ ಸನ್ನಿಧಿಯಲ್ಲಿ ನ. 16ರ ಸಂಜೆ 6.30ಕ್ಕೆ ವಿಶ್ವಾವಸುನಾಮ ಸಂವತ್ಸರದ ಕಾರ್ತಿಕ ಕೃಷ್ಣ ದ್ವಾದಶಿಯಂದು ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಭವ್ಯ ಕಾರ್ತಿಕ ದೀಪೋತ್ಸವ ಸಂಭ್ರಮವನ್ನು ಆಚರಿಸಲಾಗುತ್ತಿದ್ದು, ಭಕ್ತಾಧಿಗಳು ಪಾಲ್ಗೊಳ್ಳುವಂತೆ ಪ್ರಕಟಣೆ ಕೋರಿದೆ.

# ಯುಎಪಿಎ ಪ್ರಕರಣದಲ್ಲಿ ಮುಸ್ಲಿಂ ವ್ಯಕ್ತಿಗೆ ಜಾಮೀನು ನಿರಾಕರಿಸಿದ ಸುಪ್ರೀಂ ಕೋರ್ಟ್ : 'ಸಂದೇಶ ನೀಡಲು ಇದು ಅತ್ಯುತ್ತಮ ಬೆಳಿಗ್ಗೆ' ಎಂದ ನ್ಯಾಯಾಲಯ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ಆರೋಪಿಯಾಗಿರುವ ಮುಸ್ಲಿಂ ವ್ಯಕ್ತಿ ಸೈಯದ್ ಮಾಮೂರ್ ಅಲಿ ಅಥವಾ ಮಾಮೂರ್ ಭಾಯಿಗೆ ಜಾಮೀನು ನಿರಾಕರಿಸಿದ ಸುಪ್ರೀಂ ಕೋರ್ಟ್, 'ಸಂದೇಶ ಕಳುಹಿಸಲು ಇದು ಅತ್ಯುತ್ತಮ ಬೆಳಿಗ್ಗೆ" ಎಂದು ಮಂಗಳವಾರ (ನ.11) ಹೇಳಿದೆ.

ದೆಹಲಿಯ ಕೆಂಪು ಕೋಟೆ ಬಳಿ ಸ್ಫೋಟ ಸಂಭವಿಸಿದ ಮರುದಿನ ಸುಪ್ರೀಂ ಕೋರ್ಟ್ ಮೇಲಿನ ಹೇಳಿಕೆ ನೀಡಿದೆ.

# ಆಶ್ರಯ ನಿವೇಶನ ನೀಡಲು ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪಟ್ಟಣದಲ್ಲಿ ಸಮಗಾರ ಸಮಾಜದ ನಿವೇಶನ ರಹಿತರಿಗೆ ಆಶ್ರಯ ನಿವೇಶನ ಮತ್ತು ಸಮುದಾಯ ಭವನ ನಿರ್ಮಾಣಕ್ಕೆ ಜಾಗ ನೀಡುವಂತೆ ಕರ್ನಾಟಕ ರಾಜ್ಯ ಸಮಗಾರ (ಚಮ್ಮಾರ) ಸಂಘದ ಜಿಲ್ಲಾಧ್ಯಕ್ಷ ಅನಿಲ ಮುಳಗುಂದ ನೇತೃತ್ವದಲ್ಲಿ ಸಮಾಜ ಬಾಂಧವರು ಬುಧವಾರ ಶಾಸಕರು, ತಹಸೀಲ್ದಾರರು ಮತ್ತು ಮುಖ್ಯಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅನಿಲ ಮುಳಗುಂದ, ಲಕ್ಷ್ಮೇಶ್ವರ ಪಟ್ಟಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಸಮಗಾರ ಸಮಾಜದವರು ಸಣ್ಣಪುಟ್ಟ ವ್ಯಾಪಾರ-ಉದ್ಯೋಗ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ.

ಅನೇಕರಿಗೆ ಸ್ವಂತ ಮನೆಯಿಲ್ಲದೇ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದಾರೆ. ಅಂಥವರಿಗೆ ಆಶ್ರಯ ಯೋಜನೆಯಡಿ ನಿವೇಶನ ಕಲ್ಪಿಸಬೇಕು ಹಾಗೂ ಸಮಾಜದ ಜನರ ಕಾರ್ಯಗಳಿಗೆ ಸಮುದಾಯ ಭವನ ನಿರ್ಮಾಣಕ್ಕೂ ಜಾಗೆ ಕೊಡಬೇಕು ಎಂದು ಕೋರಿದರು.

ಮನವಿ ಪತ್ರ ಸ್ವೀಕರಿಸಿದ ಶಾಸಕ ಡಾ. ಚಂದ್ರು ಲಮಾಣಿ ಸಮಾಜದ ಅರ್ಹ ಫಲಾನುಭವಿಗಳಿಗೆ ಆಶ್ರಯ ನಿವೇಶನ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಮುಖ್ಯಾಧಿಕಾರಿ ಮಾಂತೇಶ ಬೀಳಗಿ ಮನವಿ ಸ್ವೀಕರಿಸಿದರು. ಈ ವೇಳೆ ಕಲ್ಯಾಣ ವಿವಿಧೋದ್ದೇಶ ಮಹಿಳಾ ಸಹಕಾರಿ ಸಂಘದ ಅಧ್ಯಕ್ಷೆ ಲಕ್ಷ್ಮೀಬಾಯಿ ಟಾಕಪ್ಪ ಸಾತಪುತೆ, ಕಾರ್ಯದರ್ಶಿ ಲತಾ ಎಸ್. ಹಂಜಗಿ, ಟಾಕಪ್ಪ ಸಾತಪುತೆ, ಮಂಜುನಾಥ ಹಂಜಗಿ, ಪರಶುರಾಮ ಸಾತಪುತೆ, ಅನುರಾಜ ಹಂಜಗಿ ಸೇರಿ ಹಲವರಿದ್ದರು.


ಕರ್ನಾಟಕ ಸರಕಾರ

**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**

ಜಿಲ್ಲಾ : ಗದಗ ರಾಜ್ಯ : ಕರ್ನಾಟಕ

ದೂ : 08372-259932 ಇ-ಮೇಲ್ : ka.gadag.betageri.cmc@gmail.com

ನಂ.ಗಬೆನಸ/ತಾಂ.ವಿ/ನ.ಅ.ಎಸ್.ಎಫ್.ಸಿ&15ನೇಹ.ಸು/ವಹಿ/ಟೆಂಡರ್/2025-26 ದಿನಾಂಕ:12-11-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಗದಗ-ಬೆಟಗೇರಿ ನಗರಸಭೆಯ ಸನ್ 2025-26ನೇ ಸಾಲಿನ ನಗರಸಭೆ ಅನುದಾನದ ಹಾಗೂ 15ನೇ ಹಣಕಾಸು ಮುಕ್ತನಿಧಿ ಮತ್ತು ನಿರ್ಬಂಧಿತ ಅನುದಾನದ, ಎಸ್.ಎಫ್.ಸಿ. ಅನುದಾನದಲ್ಲಿ ಮತ್ತು ಸ್ವಚ್ಛ ಭಾರತ ಮಿಷನ್ (SBM) 2.0 ಯೋಜನೆಯಲ್ಲಿ ವೈಯಕ್ತಿಕ ಶೌಚಾಲಯ ಸಾರ್ವಜನಿಕ ಶೌಚಾಲಯ, ಸಮುದಾಯ ಶೌಚಾಲಯ, ಆಸ್ಪಿರೇಷನಲ್ ಶೌಚಾಲಯ ಹಾಗೂ ಮೂತ್ರಾಲಯ ನಿರ್ಮಾಣ **2ನೇ ಕರೆಯ ಒಟ್ಟು 19** ಕಾಮಗಾರಿಗಳ **ಟೆಂಡರ್‌ಗಿಟ್ಟ ಮೊತ್ತ ರೂ.191.71ಲಕ್ಷಗಳ** ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ-ಸಂಗ್ರಹಣಾ ವೇದಿಕೆಯಡಿ, **ಇಂಡೆಂಟ್ ನಂ:**

**(1)48698(SC)/Call-2, (2)48721(Others)/Call-2, (3)48692(Cat-I)/Call-2, (4)51165(Others)/Call-2, (5)47426(ST)/Call-2, (6)47429(Others)/Call-2, (7)47508(Cat-II-A)/Call-2, (8)47512(Cat-II-A)/Call-2, (9)47580(SC)/Call-2, (10)47587(Others)/Call-2, (11)47591 (Others)/Call-2, (12)47592(SC)/Call-2, (13)47597(Cat-I)/Call-2, (14)47598(Cat-II-A)/Call-2, (15)47603(SC)/Call-2, (16)47604 (SC)/Call-2, (17)47605(ST)/Call-2, (18)47607(ST)/Call-2, (19) 6149/Call-2**

ಮೇಲಿನ ಕಾಮಗಾರಿಗಳ ಇಂಡೆಂಟ್‌ಗಳಿಗೆ http://kppp.karnataka.gov.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ.

ಅದರಂತೆ ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ.ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು Electronic ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗಧಿ ಪಡಿಸಿದ ದಿನಾಂಕಗಳಂದು ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | 19-11-2025 Up to 16.00 Hours |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 20-11-2025 Up to 16.30 Hours |

ಸದರಿ ಟೆಂಡರ್‌ಗೆ ಸಂಬಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ KPPP Portal ನಲ್ಲಿ ಪ್ರಕಟಿಸಲಾಗುವುದು, ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-ಪೌರಾಯುಕ್ತರು
ನಗರಸಭೆ ಗದಗ-ಬೆಟಗೇರಿ

ವಾ.ಸಾ.ಇ/ಗದಗ/374/ದೇಶಪಾಂಡೆಪಬ್ಲಿಸಿಟಿ/2025-26



**ಪುರಸಭೆ ಕಾರ್ಯಾಲಯ, ಮುಂಡರಗಿ**

ಜಿ:ಗದಗ, ಕರ್ನಾಟಕ -582118

website: www.mundargitown.mrc.gov.in

ದೂರವಾಣಿ/ಫ್ಯಾಕ್ಸ್: 08371/262638 Email: ka.mundargi.tmc@gmail.com

ಕ್ರಸಂ:ಪುಸಮುಂ/ಆ.ವಿ/ಎಸ್.ಎಫ್.ಸಿ/ವಹಿ/2025-26 ದಿನಾಂಕ: 11-11-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಪಾರದರ್ಶಕ ನಿಯಮಾವಳಿ 1999 ಹಾಗೂ 2000 ಪ್ರಕಾರ ಸನ್-2025-26 ನೇ ಸಾಲಿನ ಎಸ್.ಎಫ್.ಸಿ ಶೇ.24.10% ಮುಕ್ತ ನಿಧಿ ಎಸ್.ಸಿ.ಎಸ್.ಪಿ & ಟಿ.ಎಸ್.ಪಿ ಯೋಜನೆಯಡಿಯಲ್ಲಿ ಈ ಕೆಳಕಂಡಂತೆ ಟೆಂಡರ್ ಕರೆಯಲಾಗಿದ್ದು ವಿವರ ಈ ಕೆಳಗಿನಂತಿದೆ.

| ಕ್ರ.ಸಂ. | ಕಾರ್ಯಕ್ರಮದ ವಿವರ | ಅಂದಾಜು ಮೊತ್ತ ಲಕ್ಷಗಳಲ್ಲಿ | ಇ.ಎಂ.ಡಿ | ಫಾರ್ಮ ಫೀ |
|---|---|---|---|---|
| 1 | 2025-26 ನೇ ಸಾಲೀನ ಎಸ್.ಎಫ್.ಸಿ ಶೇ.24.10 ಅನುದಾನಡಿಯಲ್ಲಿ ಲಭ್ಯವಾಗುವ ಮೊತ್ತಕ್ಕೆ ಪೌರಕಾರ್ಮಿಕ ಸಿಬ್ಬಂದಿಗಳಿಗೆ ಅವಶ್ಯವಿರುವ ಸುರಕ್ಷತಾ ಧಿರಿಸುಗಳನ್ನು ಪೂರೈಸುವುದು. | 3.00 | 7,500/- | 1000/- |
| 2 | 2025-26 ನೇ ಸಾಲೀನ ಎಸ್.ಎಫ್.ಸಿ ಶೇ.24.10 ಹಾಗೂ ಪುರಸಭೆಯ ಸಾಮಾನ್ಯ ನಿಧಿಯಡಿಯಲ್ಲಿ ಲಭ್ಯವಾಗುವ 04 ತಿಂಗಳಿಗೆ 40 ಜನ ಪೌರಕಾರ್ಮಿಕರಿಗೆ ಹಾಗೂ ಇತರೆ 13 ಜನ ಸ್ವಚ್ಚತಾ ಸಿಬ್ಬಂದಿ ಸೇರಿದಂತೆ ಒಟ್ಟು 53 ಜನರಿಗೆ ಬೆಳಗಿನ ಉಪಹಾರ ಹಾಗೂ 01 ಕುದಿಸಿದ ತತ್ತಿ ಪೂರೈಸುವ ಬಗ್ಗೆ | 2.24 | 5,611/- | 1000/- |

ಅರ್ಹ ಪೂರೈಕೆದಾರರು ತಮ್ಮ ದರವಾರುಗಳನ್ನು ನಿಗದಿತ ಅವಧಿಯಲ್ಲಿ ಸಲ್ಲಿಸತಕ್ಕದ್ದು ಅವಧಿ ಮೀರಿ ಬಂದ ದರವಾರುಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ. (ರಜಾ ದಿನಗಳನ್ನು ಹೊರತುಪಡಿಸಿ)

**ಟೆಂಡರ್ ಷರತ್ತುಗಳು**

1. ಅರ್ಹ ಅಧಿಕೃತ ಪೂರೈಕೆದಾರರು ಖಾಲಿ ಟೆಂಡರ್‌ಗಳನ್ನು ಕೋರಿ ಅರ್ಜಿ ಸಲ್ಲಿಸುವ & ಖಾಲಿ ಟೆಂಡರ್ ಶೆಡ್ಯೂಲ್-ಬಿ ವಿತರಿಸುವ **ದಿನಾಂಕ:11-11-2025** ರಿಂದ **ದಿನಾಂಕ: 19-11-2025, 4-00** ಗಂಟೆಯ ವರೆಗೆ.
2. ಭರಣಾ ಮಾಡಿ ಮುಚ್ಚಿದ ಟೆಂಡರ್ ಫಾರ್ಮಗಳ ಮೇಲೆ ಸನ್-2025-26 ನೇ ಸಾಲಿನ ಸುರಕ್ಷತಾ ಧಿರಿಸುಗಳ ಪೂರೈಸುವ ಕುರಿತು ಅಂತಾ ಬರೆದು ಟೆಂಡರ್ ಪೆಟ್ಟಿಗೆಯಲ್ಲಿ ಹಾಕಲು ನಿಗಧಿಪಡಿಸಿದ **ದಿನಾಂಕ:19-11-2025 ಸಾಯಂಕಾಲ 4-00** ಗಂಟೆಯೊಳಗಾಗಿ ಪುರಸಭೆ ಕಾರ್ಯಾಲಯ ಮುಂಡರಗಿ ಕಾರ್ಯಾಲಯದಲ್ಲಿ ಇಟ್ಟಂತಂಹ ಟೆಂಡರ್ ಪೆಟ್ಟಿಗೆಯಲ್ಲಿ ಟೆಂಡರ್ ಹಾಕತಕ್ಕದ್ದು. ಟೆಂಡರ್ ತೆರೆಯುವ ಗುತ್ತಿಗೆದಾರರ ಹಾಜರಾತಿಯಲ್ಲಿ ಅಂದೇ ಅಥವಾ ಮುಂದಿನ ಯಾವುದಾದರು ಕೆಲಸದ ಅವಧಿಯಲ್ಲಿ ಪುರಸಭೆ ಕಚೇರಿಯಲ್ಲಿ ತೆರೆಯಲಾಗುವುದು.

ಸಹಿ/- ಮುಖ್ಯಾಧಿಕಾರಿ
ಪುರಸಭೆ ಮುಂಡರಗಿ

ವಾ.ಸಾ.ಇ/ಗದಗ/371/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka